ವಿಜಯಪುರ | ಸಂಪುಟ 04 | ಸಂಚಿಕೆ 097 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಗುರುವಾರ, ಜೂನ್, 04, 2026

"ಕರ್ನಾಟಕದ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ ಶ್ರೀ ಡಿ.ಕೆ. ಶಿವಕುಮಾರ್ ಅವರಿಗೆ ಅಭಿನಂದನೆಗಳು. ಅವರ ಅಧಿಕಾರಾವಧಿಗೆ ಶುಭಾಶಯಗಳು. ಕೇಂದ್ರವು ಕರ್ನಾಟಕ ಸರ್ಕಾರದೊಂದಿಗೆ ಜನರ ಕಲ್ಯಾಣಕ್ಕಾಗಿ ನಿಕಟವಾಗಿ ಕಾರ್ಯನಿರ್ವಹಿಸಲಿದೆ."



■ ನರೇಂದ್ರ ಮೋದಿ
ಪ್ರಧಾನ ಮಂತ್ರಿಗಳು

# ನೂತನ ಮುಖ್ಯಮಂತ್ರಿಯಾಗಿ ಡಿ.ಕೆ.ಶಿವಕುಮಾರ್ ಪ್ರಮಾಣವಚನ

## ಜಿ.ಪರಮೇಶ್ವರ ಉಪಮುಖ್ಯಮಂತ್ರಿ | ರಾಜ್ಯಪಾಲರಿಂದ ಪ್ರಮಾಣ ವಚನ ಬೋಧನೆ | ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ನಿರ್ಗಮಿತ ಸಿಎಂ ಸಿದ್ಧರಾಮಯ್ಯ ಭಾಗಿ

ಬೆಂಗಳೂರು: ಅರವತ್ತನಾಲ್ಕು ವರ್ಷದ ದೊಡ್ಡಲಹಳ್ಳಿ ಕೆಂಪೇಗೌಡ ಶಿವಕುಮಾರ್ (ಡಿಕೆ ಶಿವಕುಮಾರ್) ಬುಧವಾರ ಕರ್ನಾಟಕದ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದರು.

ಎಂಟು ಬಾರಿ ಶಾಸಕರಾಗಿರುವ ಅವರು, ಇತರ 13 ಹಿರಿಯ ಶಾಸಕರೊಂದಿಗೆ, ಕರ್ನಾಟಕದ ಲೋಕಭವನದಲ್ಲಿ ನಡೆದ ಸಮಾರಂಭದಲ್ಲಿ ಪ್ರಮಾಣ ವಚನ ಸ್ವೀಕರಿಸಿದರು.

ಏತನ್ಮಧ್ಯೆ, ಹಿರಿಯ ಕಾಂಗ್ರೆಸ್ ನಾಯಕ ಜಿ ಪರಮೇಶ್ವರ ಉಪಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದರು. ನೂರಾರು ಜನರ ಸಮ್ಮುಖದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅಧಿಕಾರ ಮತ್ತು ಗೌಪ್ಯತೆಯ ಪ್ರಮಾಣ ವಚನ ಬೋಧಿಸಿದರು.

ಶಿವಕುಮಾರ್ ವೀರ ಗಂಗಾಧರ ಅಜ್ಜಯ್ಯ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದರು. ಪ್ರಮಾಣ ವಚನ ಸ್ವೀಕರಿಸುವ ಮೊದಲು, ಅವರು ನೆರೆದಿದ್ದವರಿಗೆ ನಮಸ್ಕರಿಸಿ, ಅಜ್ಜಯ್ಯ ಅವರಿಗೆ ಪುಷ್ಪ ನಮನ ಸಲ್ಲಿಸಿದರು.

ಭಾರತೀಯ ಸಂವಿಧಾನದ ಪ್ರತಿಯನ್ನು ಹಿಡಿದುಕೊಂಡು, ಶಿವಕುಮಾರ್ ಕರ್ನಾಟಕದ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದರು.

ಹಿರಿಯ ಶಾಸಕರಾದ ಕೆ.ಎಚ್. ಮುನಿಯಪ್ಪ, ಕೆ.ಜೆ. ಜಾರ್ಜ್, ಎಂ.ಬಿ. ಪಾಟೀಲ್, ರಾಮಲಿಂಗ ರೆಡ್ಡಿ, ಸತೀಶ್ ಜಾರಕಿಹೊಳಿ, ಕೃಷ್ಣ ಬೈರೇಗೌಡ, ಪ್ರಿಯಾಂಕ್ ಖರ್ಗೆ, ಯು.ಟಿ. ಖಾದರ್, ಈಶ್ವರ್ ಖಂಡ್ರೆ, ಡಾ. ಯತೀಂದ್ರ ಸಿದ್ದರಾಮಯ್ಯ, ಬೈರತಿ ಸುರೇಶ್ ಮತ್ತು ಶರಣ್ ಪ್ರಕಾಶ್ ಪಾಟೀಲ್ ಕೂಡ ಪ್ರಮಾಣ ವಚನ ಸ್ವೀಕರಿಸಿದರು.



ಯು.ಟಿ. ಖಾದರ್ ಮತ್ತು ಡಾ. ಯತೀಂದ್ರ ಹೊಸದಾಗಿ ಸೇರ್ಪಡೆಗೊಂಡಿದ್ದರೂ, ಉಳಿದವರು ಈ ಹಿಂದೆ ಸಿದ್ದರಾಮಯ್ಯ ಅವರ ಸಂಪುಟದಲ್ಲಿ ಸಚಿವರಾಗಿ ಸೇವೆ ಸಲ್ಲಿಸಿದ್ದರು. ಅವರಲ್ಲಿ ನಾಲ್ವರು ಶಾಸಕರು ಬೆಂಗಳೂರಿನವರು.

ಗ್ಲಾಸ್ ಹೌಸ್ ಅನ್ನು ಕೆಂಪು ಮತ್ತು ಹಳದಿ ಬಣ್ಣಗಳಲ್ಲಿ ಅಲಂಕರಿಸಲಾಗಿತ್ತು, ಇದು ಕರ್ನಾಟಕದ ಧ್ವಜದ ಬಣ್ಣಗಳನ್ನು ಪ್ರತಿಬಿಂಬಿಸುತ್ತದೆ. ಜ್ಯೋತಿಷಿಯ ಸಲಹೆಯಂತೆ ವೇದಿಕೆಯನ್ನು ಪೂರ್ವಕ್ಕೆ ಮುಖ ಮಾಡಿ ಇರಿಸಲಾಗಿತ್ತು, ಇದನ್ನು ಶುಭವೆಂದು ಪರಿಗಣಿಸಲಾಗಿದೆ.



ವೇದಿಕೆಗೆ ಹೋಗುವ ಮೊದಲು, ಶಿವಕುಮಾರ್ ಪ್ರಮಾಣವಚನ ಸಮಾರಂಭಕ್ಕಾಗಿ ನೆರೆದಿದ್ದ ವಿವಿಧ ಧಾರ್ಮಿಕ ನಾಯಕರ ಆಶೀರ್ವಾದ ಪಡೆದರು. ಅವರಲ್ಲಿ ಕೆಲವರು ಅವರ ಮೇಲೆ ಹೂದಳಗಳನ್ನು ಸುರಿಸಿದರೆ, ಇತರರು ಆಶೀರ್ವಾದ ಮತ್ತು ಸದ್ಭಾವನೆಯ ಸಂಕೇತವಾಗಿ 'ರುದ್ರಾಕ್ಷ ಮಾಲೆ' ನೀಡಿದರು.

ಶಿವಕುಮಾರ್ ಅವರು ಕಂದು ಬಣ್ಣದ ರೇಷ್ಮೆ ಜುಬ್ಬಾ ಮತ್ತು ಕಾಂಗ್ರೆಸ್ ಪಕ್ಷದ ತ್ರಿವರ್ಣ ಧ್ವಜವನ್ನು ಹೊಂದಿರುವ ಶಾಲು ಧರಿಸಿದ್ದರು. ಪ್ರಮಾಣ ವಚನ ಸ್ವೀಕರಿಸುವ ಮೊದಲು ಶಿವಕುಮಾರ್ ಗಣ್ಯರನ್ನು ಸ್ವಾಗತಿಸಿದರು. ಶಿವಕುಮಾರ್ ಅವರ ಪತ್ನಿ ಉಷಾ, ಮಗಳು ಐಶ್ವರ್ಯ ಡಿಕೆಎಸ್ ಹೆಗ್ಡೆ ಮತ್ತು ಇತರ ಕುಟುಂಬ ಸದಸ್ಯರು ಉಪಸ್ಥಿತರಿದ್ದರು.

### ಭಾಗವಹಿಸಿದ್ದ ಗಣ್ಯರು

**ಪ್ರಮಾಣವಚನ ಸಮಾರಂಭದಲ್ಲಿ ಭಾಗವಹಿಸಿದ್ದ ಗಣ್ಯರಲ್ಲಿ ಕರ್ನಾಟಕದ ಮುಖ್ಯ ನ್ಯಾಯಮೂರ್ತಿ ವಿಭು ಬಕ್ರು, ಇನ್ಫೋಸಿಸ್ ಸಹ-ಸಂಸ್ಥಾಪಕ ನಾರಾಯಣ ಮೂರ್ತಿ ಮತ್ತು ಅವರ ಪತ್ನಿ ರಾಜ್ಯಸಭಾ ಸದಸ್ಯೆ ಸುಧಾ ಮೂರ್ತಿ; ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ನಿರ್ಮಲಾನಂದನಾಥ ಸ್ವಾಮಿ, ಕರ್ನಾಟಕ ರಾಜ್ಯ ಕ್ರಿಕೆಟ್ ಅಸೋಸಿಯೇಷನ್ ಅಧ್ಯಕ್ಷ ವೆಂಕಟೇಶ್ ಪ್ರಸಾದ್, ಮಾಜಿ ಭಾರತೀಯ ಕ್ರಿಕೆಟಿಗರಾದ ಮೊಹಮ್ಮದ್ ಅಜರುದ್ದೀನ್, ಅನಿಲ್ ಕುಂಬ್ಳೆ, ಖ್ಯಾತ ನಟ ಧನಂಜಯ, ಸಂಗೀತ ನಿರ್ದೇಶಕರಾದ ಅರ್ಜುನ್ ಜನ್ಯ ಮತ್ತು ಗುರುಕಿರಣ್ ಮತ್ತು ನಟಿ-ರಾಜಕಾರಣಿ ರಮ್ಯಾ ಸೇರಿದ್ದಾರೆ.**

ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ನಿರ್ಗಮಿತ ಸಿಎಂ ಸಿದ್ದರಾಮಯ್ಯ, ಮಾಜಿ ಸಿಎಂ ವೀರಪ್ಪ ಮೊಯ್ಲಿ, ಎಐಸಿಸಿ ಪ್ರಧಾನ ಕಾರ್ಯದರ್ಶಿ (ಕರ್ನಾಟಕ ಉಸ್ತುವಾರಿ) ರಣದೀಪ್ ಸಿಂಗ್ ಸುರ್ಜೇವಾಲಾ, ಎಐಸಿಸಿ ಪ್ರಧಾನ ಕಾರ್ಯದರ್ಶಿ (ಸಂಘಟನೆ) ಮತ್ತು ರಾಜ್ಯಸಭಾ ಸದಸ್ಯ ಕೆ.ಸಿ. ವೇಣುಗೋಪಾಲ್, ತೆಲಂಗಾಣ ಮುಖ್ಯಮಂತ್ರಿ ರೇವಂತ್ ರೆಡ್ಡಿ, ಕೇರಳ ಸಿಎಂ ವಿ.ಡಿ. ಸತೀಶನ್, ಹಿಮಾಚಲ ಪ್ರದೇಶ ಸಿಎಂ ಸುಖವಿಂದರ್ ಸಿಂಗ್ ಸುಖು ಮತ್ತು ಇತರರು ಸಮಾರಂಭದಲ್ಲಿ ಭಾಗವಹಿಸಿದ್ದರು.

# ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್: ಅರ್ಜಿ ಆಹ್ವಾನ

■ ಉದಯ ರಶ್ಮಿ ದಿನಪತ್ರಿಕೆ

ಬೆಂಗಳೂರು: ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ದಿನಪತ್ರಿಕೆಗಳು/ಮಾಧ್ಯಮ ಸಂಸ್ಥೆಗಳಲ್ಲಿ ತಾಲ್ಲೂಕು ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿರುವ ಪತ್ರಕರ್ತರಿಗೆ ತಿದ್ದುಪಡಿ ಮಾಡಲಾದ ಹೊಸ ಮಾರ್ಗಸೂಚಿಯನ್ವಯ ಉಚಿತ ಬಸ್ ಪಾಸ್ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಪತ್ರಕರ್ತರು ಕಾರ್ಯನಿರ್ವಹಿಸುತ್ತಿರುವ ಸಂಸ್ಥೆಗಳಲ್ಲಿ "ಪೂರ್ಣಾವಧಿ/ಅರೆಕಾಲಿಕ ವರದಿಗಾರರಾಗಿ ನೇಮಕವಾಗಿದ್ದಲ್ಲಿ ಆಯಾ ಮಾಧ್ಯಮ ಸಂಸ್ಥೆಯ ಸಂಪಾದಕರ/ ಸ್ಥಾನಿಕ ಸಂಪಾದಕರ/ ಮುಖ್ಯಸ್ಥರ ಶಿಫಾರಸ್ಸು ಪತ್ರ ಮತ್ತು ಸೇವಾ ಪ್ರಮಾಣ ಪತ್ರವನ್ನು ಲಗತ್ತಿಸಿ "ಸೇವಾಸಿಂಧು" ಪೋರ್ಟಲ್ https://sevasindhu.karnataka.gov.in ಮೂಲಕ ಆನ್ ಲೈನ್ ನಲ್ಲಿ ಅರ್ಜಿಗಳನ್ನು ಸಲ್ಲಿಸಬಹುದು.

2025ರ ಸೆಪ್ಟೆಂಬರ್ 12ರ ನಂತರ ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ, ಮತ್ತೊಮ್ಮೆ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಈ ಹಿಂದೆ ಇದ್ದ ಮಾರ್ಗಸೂಚಿಯಲ್ಲಿ 11 ತಿಂಗಳ ವೇತನ ಪತ್ರ ಸಲ್ಲಿಸಬೇಕು ಎಂಬ ಷರತ್ತನ್ನು ಸಡಿಲಿಸಿ. ಆಯಾ ಮಾಧ್ಯಮ ಸಂಸ್ಥೆಯ ಸಂಪಾದಕರ, ಸ್ಥಾನಿಕ ಸಂಪಾದಕರ/ ಮುಖ್ಯಸ್ಥರ ಶಿಫಾರಸ್ಸು ಪತ್ರವನ್ನು ಪರಿಗಣಿಸಲು ಅವಕಾಶ ಕಲ್ಪಿಸಲಾಗಿದೆ. ಆನ್ ಲೈನ್ ನಲ್ಲಿ ಸಲ್ಲಿಸಲಾದ ಅರ್ಜಿ ಮತ್ತು ಲಗತ್ತಿಸಲಾಗಿರುವ ದಾಖಲೆಗಳ ಒಂದು ಪ್ರತಿಯನ್ನು ಆಯಾ ಜಿಲ್ಲೆಯ ವಾರ್ತಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು.

ಸ್ವೀಕೃತ ಅರ್ಜಿಗಳನ್ನು ಆಯ್ಕೆ ಸಮಿತಿಯ ಸಭೆಯಲ್ಲಿ ಪರಿಶೀಲಿಸಿ ಬಸ್ ಪಾಸ್ ಮಂಜೂರು ಮಾಡಲಾಗುತ್ತದೆ. ತಾಲ್ಲೂಕು ಮಟ್ಟದ ಪತ್ರಕರ್ತರಿಗೆ ಸುದ್ದಿ ಸಂಗ್ರಹಿಸಲು ಅನುಕೂಲ ಕಲ್ಪಿಸಲು ಸರ್ಕಾರವು ವಾರ್ತಾ ಇಲಾಖೆಯ ಮೂಲಕ ಉಚಿತ ಬಸ್ ಪಾಸ್ ಗಳನ್ನು ನೀಡುತ್ತಿದೆ. ರಾಜ್ಯದ ಎಲ್ಲಾ ತಾಲ್ಲೂಕುಗಳ ಅರ್ಹ ಪತ್ರಕರ್ತರು ಕೂಡಲೇ "ಸೇವಾಸಿಂಧು" ಪೋರ್ಟಲ್ ಮೂಲಕ 2026 ರ ಜೂನ್ 20 ರೊಳಗೆ ಅರ್ಜಿಗಳನ್ನು ಸಲ್ಲಿಸಬೇಕು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಹೇಮಂತ್ ನಿಂಬಾಳ್ಕರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯುವಕರು ದುಶ್ಚಟಗಳಿಂದ ದೂರವಿದ್ದು ಸ್ವಾಸ್ಥ್ಯ ಸಮಾಜ ನಿರ್ಮಿಸಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಯುವಜನತೆ ದುಶ್ಚಟಗಳಿಂದ ದೂರವಿರಬೇಕು, ತಂಬಾಕು ಸೇವನೆ ಸೇವನೆ ತ್ಯಜಿಸಿ, ಆರೋಗ್ಯಯುತ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕೆಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾಅರ್ಯದರ್ಶಿ ಅರವಿಂದ್ ಎಸ್. ಹಾಗರಗಿ ಹೇಳಿದರು. ಅವರು ಬುಧವಾರ ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲೂಕು ಆರೋಗ್ಯ ಅಧಿಕಾರಿಗಳ ಕಾರ್ಯಾಲಯ, ಕಲಬುರಗಿಯ ಇಂಡಿಯನ್ ಕ್ಯಾನ್ಸರ್ ಸೊಸೈಟಿ, ವಿಜಯಪುರದ ನಾಗೂರ್ ನರ್ಸಿಂಗ್ ಕಾಲೇಜು ಹಾಗೂ ವಿವಿಧ ಸಂಘ-ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಸಭಾಭವನದಲ್ಲಿ ಹಮ್ಮಿಕೊಂಡಿದ್ದ ವಿಶ್ವ ತಂಬಾಕು ರಹಿತ ದಿನಾಚರಣೆಯ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

### ಜಾಗೃತಿ ಜಾಥಾಕ್ಕೆ ಚಾಲನೆ

ಕಾರ್ಯಕ್ರಮದ ಅಂಗವಾಗಿ ಸಾರ್ವಜನಿಕರಲ್ಲಿ ತಂಬಾಕು ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸಲು ಹಮ್ಮಿಕೊಳ್ಳಲಾಗಿದ್ದ ಬೃಹತ್ ಜಾಗೃತಿ ಜಾಥಾಕ್ಕೆ ಮೂರನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಖಾದರ್ ಸಾಬ್ ಹುಸೇನ್ ಸಾಬ್ ಬೆನಕಟ್ಟಿ, ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಉಚಿತ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಅರವಿಂದ್ ಹಾಗರಗಿ ಮತ್ತು ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದ ಅಧಿಕಾರಿಗಳಾದ ಡಾ. ರಾಜೇಶ್ವರಿ ಗೋಲಗೇರಿ ಅವರು ಜಂಟಿಯಾಗಿ ಹಸಿರು ನಿಶಾನೆ ತೋರಿಸುವ ಮೂಲಕ ಜಾಥಾಗೆ ಚಾಲನೆ ನೀಡಿದರು. ಈ ಜಾಗೃತಿ ಜಾಥಾವು ನಗರದ ಶ್ರೀ ಸಿದ್ದೇಶ್ವರ ದೇವಸ್ಥಾನದಿಂದ ಪ್ರಾರಂಭವಾಗಿ, ಗಾಂಧಿ ಚೌಕ್ ವೃತ್ತದ ಮಾರ್ಗವಾಗಿ ಸಾಗಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯದ ಆವರಣದಲ್ಲಿ ಮುಕ್ತಾಯಗೊಂಡಿತು. ಜಾಥಾದುದ್ದಕ್ಕೂ ವಿದ್ಯಾರ್ಥಿಗಳು ತಂಬಾಕು ವಿರೋಧಿ ಘೋಷಣೆಗಳಿರುವ ಫಲಕಗಳನ್ನು ಪ್ರದರ್ಶಿಸಿ ಸಾರ್ವಜನಿಕರ ಗಮನ ಸೆಳೆದರು.



ವಿದ್ಯಾರ್ಥಿಗಳು ದೇಶದ ಭವಿಷ್ಯ. ಯುವಜನತೆ ಯಾವುದೇ ಕಾರಣಕ್ಕೂ ಧೂಮಪಾನ, ತಂಬಾಕು ಸೇವನೆಯಂತಹ ಮಾರಕ ದುಶ್ಚಟಗಳಿಗೆ ಬಲಿಯಾಗದೆ, ತಮ್ಮ ಜೀವನವನ್ನು ಶಿಸ್ತುಬದ್ಧವಾಗಿ ಮತ್ತು ಅಚ್ಚುಕಟ್ಟಾಗಿ ರೂಪಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಜಿಲ್ಲಾ ಆಸ್ಪತ್ರೆಯ ಡಾ.ಎಂ.ಟಿ.ಆರ್. ಕೋತ್ವಾಲ್ ಅವರು ವಿಶೇಷ ಉಪನ್ಯಾಸ ನೀಡಿ, ಕ್ಯಾನ್ಸರ್ ಮಹಾಮಾರಿಯಾಗಿ ಬೆಳೆಯುವ ಮುನ್ನವೇ ನಾವು ಜಾಗರೂಕರಾಗಿರಬೇಕು. ಆರಂಭಿಕ ಹಂತದಲ್ಲೇ ತಪಾಸಣೆ ಮತ್ತು ಸೂಕ್ತ ಚಿಕಿತ್ಸೆ ಪಡೆದುಕೊಳ್ಳುವುದು ಅತ್ಯಗತ್ಯ ಎಂದರು.

ಮನೋವೈದ್ಯರಾದ ಡಾ. ಮಂಜುನಾಥ್ ಮಸಳಿ ಅವರು ಮಾತನಾಡಿ, ವಿದ್ಯಾರ್ಥಿಗಳು ಸದಾ ಧನಾತ್ಮಕ ಕಲಿಕಾ ಮನೋಭಾವವನ್ನು ಬೆಳೆಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿಗಳಾದ ಎನ್. ಆರ್. ಭಗವಾನ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಜಿ. ಎಂ. ಕೋಳೂರು, ನರ್ಸಿಂಗ್ ಕಾಲೇಜಿನ ಪ್ರಾಂಶುಪಾಲರು, ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಜಿಲ್ಲಾ ತಂಬಾಕು ನಿಯಂತ್ರಣ ಘಟಕದ ಜಿಲ್ಲಾ ಸಲಹೆಗಾರರು ಡಾ. ಪ್ರಕಾಶ ಚವ್ಹಾಣ ಹಾಗೂ ಶ್ರೀಕಾಂತ್ ಪೂಜಾರ್ ಅವರು ಉಪಸ್ಥಿತರಿದ್ದರು.

### ತಂಬಾಕು ಮುಕ್ತ ಸಮಾಜಕ್ಕೆ ಪ್ರತಿಜ್ಞಾವಿಧಿ ಸ್ವೀಕಾರ

ಕಲಬುರಗಿಯ ಇಂಡಿಯನ್ ಕ್ಯಾನ್ಸರ್ ಸೊಸೈಟಿಯ ಪ್ರಾದೇಶಿಕ ವಿಭಾಗದ ಪ್ರತಿನಿಧಿಯಾಗಿ ಆಗಮಿಸಿದ್ದ ಗುರುರಾಜ್ ಕುಲಕರ್ಣಿ ಅವರು ವಿದ್ಯಾರ್ಥಿಗಳಿಗೆ ಮತ್ತು ಸಾರ್ವಜನಿಕರಿಗೆ ತಂಬಾಕು ಉತ್ಪನ್ನಗಳಿಂದ ದೂರವಿರುವಂತೆ ಹಾಗೂ ತಂಬಾಕು ಮುಕ್ತ ಸಮಾಜ ನಿರ್ಮಾಣಕ್ಕೆ ಶ್ರಮಿಸುವಂತೆ ಪ್ರತಿಜ್ಞಾವಿಧಿಯನ್ನು ಬೋಧಿಸಿದರು.

**ವಿಜಯಪುರದಲ್ಲಿ ವಿಶ್ವ ತಂಬಾಕು ರಹಿತ ದಿನಾಚರಣೆ | ಜಾಗೃತಿ ಜಾಥಾ | ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಅರವಿಂದ್ ಹಾಗರಗಿ ಕರೆ**

# ಸದೃಢ ಆರೋಗ್ಯಕ್ಕೆ ಸೈಕ್ಲಿಂಗ್ ಅಗತ್ಯ : ರಾಜು ಬಿರಾದಾರ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಸದೃಢ ಆರೋಗ್ಯಕ್ಕಾಗಿ ಪ್ರತಿಯೊಬ್ಬರೂ ನಿತ್ಯ ಸೈಕಲ್ ಓಡಿಸುವ ಅಭ್ಯಾಸ ರೂಢಿಸಿಕೊಳ್ಳಬೇಕು ಎಂದು ರಾಜ್ಯ ಸೈಕ್ಲಿಂಗ್ ಅಸೋಸಿಯೇನ್ ಅಧ್ಯಕ್ಷರಾದ ರಾಜು ಬಿರಾದಾರ ಹೇಳಿದರು.

ಜಿಲ್ಲಾಡಳಿತ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಅಮೇಚೂರ್ ಸೈಕ್ಲಿಂಗ್ ಅಸೋಸಿಯೇಶನ್ ಹಾಗೂ ವಿಶಾಲ್ ಸೈಕಲ್ ಮಹಾಲ್ ಸಹಯೋಗದಲ್ಲಿ ವಿಶ್ವ ಬೈಸಿಕಲ್ ದಿನಾಚರಣೆ ಅಂಗವಾಗಿ ನಗರದ ಡಾ. ಬಿ.ಆರ್.ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಿಂದ ಆರಂಭವಾದ ಸೈಕ್ಲಿಂಗ್ ಜಾಥಾಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.






1868ರಲ್ಲಿ ಸೈಕ್ಲಿಂಗ್ ಕ್ರೀಡೆಯಾಗಿ ಪರಿವರ್ತನೆಯಾಗಿ ಭಾರತದೇಶಕ್ಕೆ 1938 ರಲ್ಲಿ ಪಾದಾರ್ಪಣೆಯಾಯಿತು. ಬಳಿಕ 70 ರ ದಶಕದಲ್ಲಿ ಅವಿಭಜಿತ ವಿಜಯಪುರ ಜಿಲ್ಲೆಯಲ್ಲಿ ಸೈಕ್ಲಿಂಗ್ ಕ್ರೀಡೆಗೆ ಹೆಚ್ಚಿನ ಪ್ರಾಧಾನ್ಯತೆ ಸಿಕ್ಕಿತು. ಇದರಿಂದಾಗಿ ಅವಿಭಜಿತ ವಿಜಯಪುರ ಜಿಲ್ಲೆಯ ಸೈಕ್ಲಿಸ್ಟಳು ರಾಷ್ಟ್ರ ಹಾಗೂ ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡುವ ಮೂಲಕ ಜಿಲ್ಲೆಯ ಕೀರ್ತಿ ಬೆಳಗಿಸಿದ್ದಾರೆ.

ಈ ಕ್ರೀಡೆ ಕೇವಲ ಸೈಕ್ಲಿಸ್ಟಳಿಗೆ ಮಾತ್ರವಲ್ಲ. ಜನಸಾಮಾನ್ಯರು ಸೈಕಲ್ ನಿತ್ಯ ಬಳಸಬಹುದಾಗಿದೆ. ನಿತ್ಯ ಸೈಕಲ್ ಸಂಚಾರ ಮಾಡುವುದರಿಂದ ಆರೋಗ್ಯದಲ್ಲಿ ಸಾಕಷ್ಟು ಬದಲಾವಣೆಗಳನ್ನು ಕಾಣಬಹುದು. ನಿತ್ಯವೂ ಸೈಕಲ್ ಸಂಚಾರ ಮಾಡುವುದರಿಂದ ಈಗಿನ ಬಿಪಿ ಮತ್ತು ಸಕ್ಕರೆ ಕಾಯಿಲೆಗಳಿಂದ ದೂರವಿದ್ದು, ಸದೃಢ ಆರೋಗ್ಯ ಕಾಪಾಡಿಕೊಳ್ಳಬಹುದಾಗಿದೆ ಎಂದರು.

ಜಿಲ್ಲಾ ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರಾದ ರಾಜಶೇಖರ ದೈವಾಡಿ ಮಾತನಾಡಿ, ಇತರೇ ಕ್ರೀಡೆಗಳಿಗಿಂತ ಇಂದಿನ ದಿನಗಳಲ್ಲಿ ಸೈಕ್ಲಿಂಗ್ ಕ್ರೀಡೆ ಸಾಕಷ್ಟು ಮಹತ್ವ ಪಡೆದುಕೊಂಡಿದೆ. ಸೈಕ್ಲಿಂಗ್ ಕ್ರೀಡೆಯಲ್ಲಿ ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿ, ಜಿಲ್ಲೆಯ ಕೀರ್ತಿ ಹೆಚ್ಚಿಸಿ, ಸದೃಢ ಆರೋಗ್ಯ ಜೀವನ ನಿರ್ವಹಣೆಗೆ ಈ ಕ್ರೀಡೆ ಅತ್ಯುಪಯುಕ್ತ ಎಂದರು.

ಜಾಥಾದಲ್ಲಿ ಆರ್‌ಕೆಎಂ ಕಾಲೇಜಿನ ವಿದ್ಯಾರ್ಥಿಗಳು, ಸೈಕ್ಲಿಂಗ್ ಕ್ರೀಡಾ ವಸತಿ ಶಾಲೆ, ವಿಸಿಜಿ ಗ್ರುಪ್, ರೈಲ್ವೆ, ಪೊಲೀಸ್ ಇಲಾಖೆ ಕ್ರೀಡಾಪಟುಗಳು,ವಿಜಯಪುರ ಸೈಕ್ಲಿಂಗ್ ಗ್ರುಪ್‌ನ ಉಪಾಧ್ಯಕ್ಷ ಶಿವನಗೌಡ ಪಾಟೀಲ, ಕಾರ್ಯದರ್ಶಿ ಸೋಮಶೇಖರ ಸ್ವಾಮಿ, ಜಿಲ್ಲಾ ಸೈಕ್ಲಿಂಗ್ ಅಸೋಸಿಯೇಶನ್ ಪದಾಧಿಕಾರಿಗಳಾದ ಗಂಗಾಧರ ಪತ್ತಾರ, ಸಂಜೀವ ಪಡತರೆ, ಸಂತೋಷ ಕುಮಾರ ಕತಕನಹಳ್ಳಿ, ಶ್ರೀಕಾಂತ ಮಠ, ಸೋಮಶೇಖರ ಮಠದ, ಲಕ್ಷ್ಮಣ ತೇರದಾಳ, ನಿಜಪ್ಪ ಎಂಟೆತ್ತು, ತರಬೇತುದಾರರಾದ ಅಲ್ಕಾ ಪಡತರೆ, ರಮೇಶ ರಾಠೋಡ, ಪೊಲೀಸ್‌ತಂಡದ ಆಸೀಫ್ ಅತ್ತಾರ ಹಾಗೂ ಇತರೇ ಸೈಕ್ಲಿಸ್ಟಳು ಉಪಸ್ಥಿತರಿದ್ದರು.

### ಸೈಕ್ಲಿಂಗ್ ಜಾಥಾಕ್ಕೆ ಚಾಲನೆ

ನಗರದ ಡಾ. ಬಿ.ಆರ್. ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಿಂದ ಆರಂಭವಾದ ಸೈಕ್ಲಿಂಗ್ ಜಾಥಾಕ್ಕೆ ರಾಜ್ಯ ಸೈಕ್ಲಿಂಗ್ ಹಸಿರು ನಿಶಾನೆ ತೋರಿಸುವುದರ ಮೂಲಕ ಜಾಥಾಕ್ಕೆ ಚಾಲನೆ ನೀಡಲಾಯಿತು.

ಡಾ. ಬಿ.ಆರ್. ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಿಂದ ಆರಂಭವಾದ ಜಾಥಾ, ಗೋಲಗುಂಬಜ್, ಬಸ್ ನಿಲ್ದಾಣ, ಬಸವೇಶ್ವರ ವೃತ್ತ, ಗಾಂಧಿ ವೃತ್ತ, ಶಿವಾಜಿ ವೃತ್ತ, ಇಬ್ರಾಹಿಂರೋಜಾ, ವಾಟರ್‌ಟ್ಯಾಂಕ್ ಮಾರ್ಗವಾಗಿ ಬಿಎಲ್‌ಡಿಇ ಕ್ಯಾಂಪಸ್ ತಲುಪಿತು. ಬಳಿಕ ಅಲ್ಲಿಂದ ನಗರದ ಶ್ರೀ ಸಿದ್ದೇಶ್ವರ ದೇವಸ್ಥಾನ, ಪುನಃ ಗಾಂಧಿವೃತ್ತ ಮೂಲಕ ಜಿಲ್ಲಾ ಕ್ರೀಡಾಂಗಣಕ್ಕೆ ತಲುಪಿತು.

**ವಿಜಯಪುರದಲ್ಲಿ ವಿಶ್ವ ಬೈಸಿಕಲ್ ದಿನಾಚರಣೆ ನಿಮಿತ್ತ ಸೈಕ್ಲಿಂಗ್ ಜಾಥಾ**

# ಶ್ರೀ ಅಪ್ಪಾಜಿ ಶಿಕ್ಷಣ ಸಂಸ್ಥೆಯಿಂದ ಗ್ರಾಮೀಣ ಭಾಗದಲ್ಲಿ ಶಿಕ್ಷಣ ಕ್ರಾಂತಿ!

## ಆಕ್ಸ್‌ಫರ್ಡ್ ಪಬ್ಲಿಕ್ ಸ್ಕೂಲ್ ಹಾಗೂ ಬಿ.ಎಂ. ಪಾಟೀಲ್ ಪ್ರೌಢಶಾಲೆ, ಗುಬ್ಬೇವಾಡ.ಇದು ಕೇವಲ ಶಾಲೆಯಲ್ಲ; ಗ್ರಾಮೀಣ ವಿದ್ಯಾರ್ಥಿಗಳ ಕನಸುಗಳಿಗೆ ರೆಕ್ಕೆ ಮೂಡಿಸುವ ಶಿಕ್ಷಣ ದೇವಾಲಯ

■ ಉದಯರಶ್ಮಿ ದಿನಪತ್ರಿಕೆ

■ ವಿಶೇಷ ವರದಿ






OXFORD INTERNATIONAL SCHOOL AND B. M. PATIL HIGH SCHOOL GUBBEWAD TQ. SINDAGI DIST. VIJAYAPUR

ವಿಜಯಪುರ: ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಗುಣಮಟ್ಟದ ಶಿಕ್ಷಣವು ಪ್ರತಿಯೊಬ್ಬ ಮಗುವಿನ ಹಕ್ಕಾಗಿದೆ. ಆದರೆ ಗ್ರಾಮೀಣ ಪ್ರದೇಶಗಳಲ್ಲಿ ಉತ್ತಮ ಶಿಕ್ಷಣ ಸೌಲಭ್ಯಗಳನ್ನು ಒದಗಿಸುವುದು ಸವಾಲಿನ ಕೆಲಸವಾಗಿದೆ. ಇಂತಹ ಸಂದರ್ಭದಲ್ಲಿ ಜಿಲ್ಲೆಯ ಸಿಂದಗಿ ತಾಲ್ಲೂಕಿನ ಗುಬ್ಬೇವಾಡ ಗ್ರಾಮದಲ್ಲಿ ಕಾರ್ಯನಿರ್ವಹಿಸುತ್ತಿರುವ ಆಕ್ಸ್‌ಫರ್ಡ್ ಪಬ್ಲಿಕ್ ಸ್ಕೂಲ್ ಹಾಗೂ ಬಿ.ಎಂ. ಪಾಟೀಲ್ ಪ್ರೌಢಶಾಲೆ ಗ್ರಾಮೀಣ ಶಿಕ್ಷಣ ಕ್ಷೇತ್ರದಲ್ಲಿ ಮಾದರಿ ಸಂಸ್ಥೆಯಾಗಿ ಹೊರಹೊಮ್ಮಿದೆ.

ಕಡಿಮೆ ಶುಲ್ಕದಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣವನ್ನು ನೀಡುವ ಮೂಲಕ ಈ ಸಂಸ್ಥೆ ಸಾವಿರಾರು ವಿದ್ಯಾರ್ಥಿಗಳ ಭವಿಷ್ಯವನ್ನು ರೂಪಿಸುತ್ತಿದೆ.

ಸಂಸ್ಥೆಯು ಶಿಕ್ಷಣವನ್ನು ಕೇವಲ ಪಠ್ಯಪುಸ್ತಕಗಳಿಗೆ ಸೀಮಿತಗೊಳಿಸದೆ, ವಿದ್ಯಾರ್ಥಿಗಳ ಸರ್ವಾಂಗೀಣ ಬೆಳವಣಿಗೆಯನ್ನು ಗುರಿಯಾಗಿಸಿಕೊಂಡು ಕಾರ್ಯನಿರ್ವಹಿಸುತ್ತಿದೆ. ಗ್ರಾಮೀಣ ಪ್ರದೇಶದ ಪಾಲಕರ ಆರ್ಥಿಕ ಪರಿಸ್ಥಿತಿಯನ್ನು ಅರ್ಥಮಾಡಿಕೊಂಡು, ಅವರ ಮಕ್ಕಳಿಗೆ ನಗರ ಮಟ್ಟದ ಶಿಕ್ಷಣವನ್ನು ಒದಗಿಸುವ ನಿಟ್ಟಿನಲ್ಲಿ ಹಲವು ವರ್ಷಗಳಿಂದ ನಿರಂತರ ಸೇವೆ ಸಲ್ಲಿಸುತ್ತಿದೆ.

**ಸಂಸ್ಥೆಯ ಸ್ಥಾಪನೆ ಮತ್ತು ಧ್ಯೇಯೋದ್ದೇಶ**

ಗ್ರಾಮೀಣ ಭಾಗದ ಮಕ್ಕಳಿಗೂ ಉತ್ತಮ ಶಿಕ್ಷಣ ದೊರಕಬೇಕು ಎಂಬ ಉದ್ದೇಶದಿಂದ ಸ್ಥಾಪಿತವಾದ ಈ ಸಂಸ್ಥೆಯು ಆರಂಭದಿಂದಲೇ ಶಿಕ್ಷಣ ಸೇವೆಯನ್ನು ಧ್ಯೇಯವಾಗಿಸಿಕೊಂಡಿದೆ. ವಿದ್ಯಾರ್ಥಿಗಳಲ್ಲಿ ಜ್ಞಾನ, ಶಿಸ್ತು, ನೈತಿಕ ಮೌಲ್ಯಗಳು ಮತ್ತು ಸಾಮಾಜಿಕ ಜವಾಬ್ದಾ–ರಿಯನ್ನು ಬೆಳೆಸುವ ಗುರಿಯನ್ನು ಹೊಂದಿದೆ.

ಸಂಸ್ಥೆಯ ಅಧ್ಯಕ್ಷರು, ಆಡಳಿತ ಮಂಡಳಿ ಹಾಗೂ ಶಿಕ್ಷಕ ವೃಂದವು ಶಿಕ್ಷಣ ಕ್ಷೇತ್ರದಲ್ಲಿ ವಿಶೇಷ ಆಸಕ್ತಿ ಹೊಂದಿದ್ದು, ಮಕ್ಕಳ ಭವಿಷ್ಯ ನಿರ್ಮಾಣಕ್ಕಾಗಿ ಶ್ರಮಿಸುತ್ತಿದ್ದಾರೆ. "ಗ್ರಾಮದ ಮಕ್ಕಳಿಗೆ ನಗರದ ಮಟ್ಟದ ಶಿಕ್ಷಣ" ಎಂಬ ಕನಸನ್ನು ಸಾಕಾರಗೊಳಿಸುವಲ್ಲಿ ಸಂಸ್ಥೆಯು ಯಶಸ್ವಿಯಾಗಿದೆ.

**ಅಂಗ ಸಂಸ್ಥೆಗಳು ಮತ್ತು ಶೈಕ್ಷಣಿಕ ವ್ಯವಸ್ಥೆ**

ಸಂಸ್ಥೆಯ ಅಡಿಯಲ್ಲಿ ನರ್ಸರಿಯಿಂದ ಎಸ್.ಎಸ್.ಎಲ್.ಸಿ.ವರೆಗೆ ಶಿಕ್ಷಣ ವ್ಯವಸ್ಥೆ ಲಭ್ಯವಿದೆ.

ನರ್ಸರಿ, ಎಲ್.ಕೆ.ಜಿ ಯಿಂದ 10ನೇ ತರಗತಿವರೆಗೆ ಮಕ್ಕಳಿಗೆ ಒಂದೇ ಕ್ಯಾಂಪಸ್‌ನಲ್ಲಿ ನಿರಂತರ ಶಿಕ್ಷಣ ಪಡೆಯುವ ಅವಕಾಶ ದೊರಕುತ್ತಿದೆ.

**ಪ್ರವೇಶ ತರಬೇತಿ ಮತ್ತು ಶೈಕ್ಷಣಿಕ ಗುಣಮಟ್ಟ**

ಪ್ರತಿ ವರ್ಷ 4 ಮತ್ತು 5ನೇ ತರಗತಿಯ ವಿದ್ಯಾರ್ಥಿಗಳಿಗೆ ವಿವಿಧ ವಸತಿ ಶಾಲೆಗಳು, ಮೊರಾರ್ಜಿ ದೇಸಾಯಿ ಶಾಲೆಗಳು, ಸೈನಿಕ ಶಾಲೆಗಳು ಹಾಗೂ ಪ್ರತಿಭಾ ಪರೀಕ್ಷೆಗಳಿಗಾಗಿ ವಿಶೇಷ ಪ್ರವೇಶ ತರಬೇತಿ ನೀಡಲಾಗುತ್ತದೆ.

ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಮನೋಭಾವ ಬೆಳೆಸಲು ವಿಶೇಷ ತರಗತಿಗಳು, ಹೆಚ್ಚುವರಿ ತರಗತಿಗಳು ಮತ್ತು ವಿಶೇಷ ಮಾದರಿ ಪರೀಕ್ಷೆಗಳು ಹಾಗೂ ಮಾರ್ಗದರ್ಶನ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತದೆ.

ಇದರಿಂದ ಅನೇಕ ವಿದ್ಯಾರ್ಥಿಗಳು ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ಸು ಸಾಧಿಸುತ್ತಿದ್ದಾರೆ.

**ಎಸ್.ಎಸ್.ಎಲ್.ಸಿ. ಫಲಿತಾಂಶದಲ್ಲಿ ಸಾಧನೆ**

ಪ್ರತಿ ವರ್ಷ ಶಾಲೆಯ ಎಸ್.ಎಸ್.ಎಲ್.ಸಿ. ಫಲಿತಾಂಶವು ಗಮನಾರ್ಹವಾಗಿರುತ್ತದೆ. ಅನೇಕ ವಿದ್ಯಾರ್ಥಿಗಳು ಉನ್ನತ ಅಂಕಗಳನ್ನು ಗಳಿಸಿ ಸಂಸ್ಥೆಯ ಕೀರ್ತಿಯನ್ನು ಹೆಚ್ಚಿಸುತ್ತಿದ್ದಾರೆ. ಶಿಕ್ಷಕರ ವೈಯಕ್ತಿಕ ಗಮನ, ಮಾರ್ಗದರ್ಶನದಿಂದ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡುತ್ತಿದ್ದಾರೆ.

**ಶಿಕ್ಷಕರ ಸಮರ್ಪಿತ ಸೇವೆ**

ಶಾಲೆಯ ಶಿಕ್ಷಕರು ಕೇವಲ ಪಾಠ ಮಾಡುವುದಲ್ಲದೆ ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೂ ವಿಶೇಷ ಗಮನ ನೀಡುತ್ತಾರೆ. ಪ್ರತಿ ವಿದ್ಯಾರ್ಥಿಯ ಕಲಿಕಾ ಸಾಮರ್ಥ್ಯವನ್ನು ಗುರುತಿಸಿ ವೈಯಕ್ತಿಕ ಮಾರ್ಗದರ್ಶನ ನೀಡುತ್ತಾರೆ.

ನಿಯಮಿತ ಪಾಠ

ವಿಶೇಷ ತರಗತಿಗಳು

ಮನೆಪಾಠ ಪರಿಶೀಲನೆ



ಪೋಷಕರ ಸಭೆ

ವೃತ್ತಿ ಮಾರ್ಗದರ್ಶನ

ಮೌಲ್ಯಾಧಾರಿತ ಶಿಕ್ಷಣ

ಇವುಗಳ ಮೂಲಕ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಸಹಕಾರಿಯಾಗುತ್ತಿದ್ದಾರೆ.

ಸುಸಜ್ಜಿತ ಕಟ್ಟಡ ಮತ್ತು ಮೂಲಭೂತ ಸೌಲಭ್ಯಗಳು

ಸಂಸ್ಥೆಯು ವಿದ್ಯಾರ್ಥಿಗಳಿಗೆ ಅಗತ್ಯವಿರುವ ಎಲ್ಲ ಮೂಲಭೂತ ಸೌಲಭ್ಯಗಳನ್ನು ಒದಗಿಸಿದೆ.

ವಿಶಾಲ ಕಟ್ಟಡ

ಶಾಲೆಯು ಸುರಕ್ಷಿತ ಹಾಗೂ ಸುಂದರ ಕಟ್ಟಡವನ್ನು ಹೊಂದಿದ್ದು, ಗಾಳಿ ಮತ್ತು ಬೆಳಕಿನ ವ್ಯವಸ್ಥೆಯು ಸಮರ್ಪಕವಾಗಿದೆ.

ತರಗತಿ ಕೊಠಡಿಗಳು

ಪ್ರತ್ಯೇಕ ಮತ್ತು ವಿಶಾಲ ತರಗತಿ ಕೊಠಡಿಗಳು ವಿದ್ಯಾರ್ಥಿಗಳಿಗೆ ಉತ್ತಮ ಕಲಿಕಾ ವಾತಾವರಣವನ್ನು ಒದಗಿಸುತ್ತವೆ.

ಬೆಂಚ್ ಮತ್ತು ಪೀಠೋಪಕರಣಗಳು

ವಿದ್ಯಾರ್ಥಿಗಳಿಗೆ ಗುಣಮಟ್ಟದ ಬೆಂಚ್ ಹಾಗೂ ಅಗತ್ಯ ಪೀಠೋಪಕರಣಗಳನ್ನು ಒದಗಿಸಲಾಗಿದೆ.

ಶುದ್ಧ ಕುಡಿಯುವ ನೀರು

ವಿದ್ಯಾರ್ಥಿಗಳ ಆರೋಗ್ಯದ ದೃಷ್ಟಿಯಿಂದ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗಿದೆ.

ಶೌಚಾಲಯ ವ್ಯವಸ್ಥೆ

ಗಂಡು ಮತ್ತು ಹೆಣ್ಣು ಮಕ್ಕಳಿಗೆ ಪ್ರತ್ಯೇಕ ಹಾಗೂ ಸ್ವಚ್ಛ ಶೌಚಾಲಯಗಳ ವ್ಯವಸ್ಥೆ ಕಲ್ಪಿಸಲಾಗಿದೆ.

ಸಿಸಿ ಕ್ಯಾಮೆರಾ

ವಿದ್ಯಾರ್ಥಿಗಳ ಸುರಕ್ಷತೆಗಾಗಿ ಶಾಲಾ ಆವರಣದಲ್ಲಿ ಸಿಸಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ.

ಸಾರಿಗೆ ಸೌಲಭ್ಯ

ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಶಾಲಾ ವಾಹನಗಳ ವ್ಯವಸ್ಥೆ ಮಾಡಲಾಗಿದೆ. ದೂರದ ಗ್ರಾಮಗಳಿಂದಲೂ ವಿದ್ಯಾರ್ಥಿಗಳು ಸುರಕ್ಷಿತವಾಗಿ ಶಾಲೆಗೆ ಆಗಮಿಸುತ್ತಿದ್ದಾರೆ.

ವಸತಿ ಸೌಲಭ್ಯ

ಅಗತ್ಯವಿರುವ ವಿದ್ಯಾರ್ಥಿಗಳಿಗೆ ವಸತಿ ವ್ಯವಸ್ಥೆ ಕಲ್ಪಿಸುವ ಮೂಲಕ ಶಿಕ್ಷಣದಲ್ಲಿ ನಿರಂತರತೆ ಕಾಪಾಡಲಾಗುತ್ತಿದೆ. ಶಿಸ್ತುಬದ್ಧ ವಾತಾವರಣದಲ್ಲಿ ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡುತ್ತಿದ್ದಾರೆ.

ಪಾಲಕರ ವಿಶ್ವಾಸದ ಕೇಂದ್ರ

ಗುಬ್ಬೇವಾಡ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಪಾಲಕರು ಈ ಸಂಸ್ಥೆಯ ಮೇಲೆ ಅಪಾರ ವಿಶ್ವಾಸ ಹೊಂದಿದ್ದಾರೆ. ಕಡಿಮೆ ವೆಚ್ಚದಲ್ಲಿ ಗುಣಮಟ್ಟದ ಶಿಕ್ಷಣ, ಶಿಸ್ತು, ಸುರಕ್ಷತೆ ಹಾಗೂ ಉತ್ತಮ ಫಲಿತಾಂಶಗಳಿಂದ ಪಾಲಕರು ಸಂತೃಪ್ತರಾಗಿದ್ದಾರೆ.

"ನಮ್ಮ ಮಕ್ಕಳ ಭವಿಷ್ಯಕ್ಕೆ ಈ ಶಾಲೆಯೇ ಉತ್ತಮ ಆಯ್ಕೆ" ಎಂದು ಅನೇಕ ಪಾಲಕರು ಅಭಿಪ್ರಾಯ ವ್ಯಕ್ತಪಡಿಸುತ್ತಾರೆ.

ಗ್ರಾಮೀಣ ಭಾಗದ ಪ್ರತಿಯೊಬ್ಬ ಮಗುವಿಗೂ ಉತ್ತಮ ಭವಿಷ್ಯ ರೂಪಿಸುವ ಮಹತ್ವದ ಕಾರ್ಯವನ್ನು ಈ ಸಂಸ್ಥೆ ಯಶಸ್ವಿಯಾಗಿ ನಿರ್ವಹಿಸುತ್ತಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಎತ್ತರಕ್ಕೆ ಬೆಳೆಯಲಿ ಎಂಬುದು ಶಿಕ್ಷಣ ಪ್ರೇಮಿಗಳ ಆಶಯವಾಗಿದೆ.




### ಆಟದ ಮೈದಾನ ಮತ್ತು ಕ್ರೀಡಾ ಚಟುವಟಿಕೆಗಳು

ವಿದ್ಯಾರ್ಥಿಗಳ ದೈಹಿಕ ಬೆಳವಣಿಗೆಗೆ ವಿಶಾಲ ಆಟದ ಮೈದಾನವಿದ್ದು, ಕ್ರೀಡೆಗಳಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸಲಾಗಿದೆ.

ಕಬಡ್ಡಿ

ಖೋ–ಖೋ

ವಾಲಿಬಾಲ್

ಅಥ್ಲೆಟಿಕ್ಸ್

ವಿವಿಧ ಕ್ರೀಡಾ ಸ್ಪರ್ಧೆಗಳು

ಇವುಗಳಲ್ಲಿ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡುತ್ತಿದ್ದಾರೆ.

### ಗ್ರಾಮೀಣ ಶಿಕ್ಷಣಕ್ಕೆ ಹೊಸ ದಿಕ್ಕು

ನಗರ ಪ್ರದೇಶಗಳಲ್ಲಿರುವ ದುಬಾರಿ ಶಾಲೆಗಳ ಸೌಲಭ್ಯಗಳನ್ನು ಗ್ರಾಮೀಣ ಭಾಗದಲ್ಲೇ ಕಡಿಮೆ ಶುಲ್ಕದಲ್ಲಿ ಒದಗಿಸುವ ಮೂಲಕ ಈ ಸಂಸ್ಥೆಯು ಶಿಕ್ಷಣ ಕ್ಷೇತ್ರದಲ್ಲಿ ಹೊಸ ಅಧ್ಯಾಯ ಬರೆದಿದೆ. ಶಿಕ್ಷಣದ ಜೊತೆಗೆ ಸಂಸ್ಕಾರ, ಶಿಸ್ತು, ವ್ಯಕ್ತಿತ್ವ ವಿಕಸನ ಮತ್ತು ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸುವಲ್ಲಿ ಮಹತ್ವದ ಪಾತ್ರ ವಹಿಸುತ್ತಿದೆ.

### ಸ್ಮಾರ್ಟ್ ಕ್ಲಾಸ್ ಸೌಲಭ್ಯ

ಆಧುನಿಕ ಶಿಕ್ಷಣ ಪದ್ಧತಿಗೆ ಅನುಗುಣವಾಗಿ ಸ್ಮಾರ್ಟ್‌ಕ್ಲಾಸ್‌ವ್ಯವಸ್ಥೆಯನ್ನುಅಳವಡಿಸಲಾಗಿದೆ.

ಪ್ರೊಜೆಕ್ಟರ್ ಸೌಲಭ್ಯ

ವಿದ್ಯಾರ್ಥಿಗಳು ದೃಶ್ಯ ಮಾಧ್ಯಮದ ಮೂಲಕ ಸುಲಭವಾಗಿ ಕಲಿಯಲು ಪ್ರೊಜೆಕ್ಟರ್ ವ್ಯವಸ್ಥೆ ಲಭ್ಯವಿದೆ.

ವಿದ್ಯುತ್ ವ್ಯವಸ್ಥೆ: ನಿರಂತರ ವಿದ್ಯುತ್ ಪೂರೈಕೆ ಹಾಗೂ ಸುರಕ್ಷಿತ ವಿದ್ಯುತ್ ವ್ಯವಸ್ಥೆಯನ್ನು ಹೊಂದಿದೆ.



"ಆಕ್ಸ್‌ಫರ್ಡ್ ಪಬ್ಲಿಕ್ ಸ್ಕೂಲ್ ಹಾಗೂ ಬಿ.ಎಂ. ಪಾಟೀಲ್ ಪ್ರೌಢಶಾಲೆ, ಗುಬ್ಬೇವಾಡ ಕೇವಲ ಒಂದು ಶಾಲೆಯಲ್ಲ, ಅದು ಗ್ರಾಮೀಣ ವಿದ್ಯಾರ್ಥಿಗಳ ಕನಸುಗಳಿಗೆ ರೆಕ್ಕೆ ನೀಡುತ್ತಿರುವ ಶಿಕ್ಷಣದ ದೇವಾಲಯವಾಗಿದೆ. ಗುಣಮಟ್ಟದ ಶಿಕ್ಷಣ, ಆಧುನಿಕ ಸೌಲಭ್ಯಗಳು, ಸಮರ್ಪಿತ ಶಿಕ್ಷಕರು, ಉತ್ತಮ ಫಲಿತಾಂಶಗಳು ಮತ್ತು ಕಡಿಮೆ ವೆಚ್ಚದಲ್ಲಿ ಶಿಕ್ಷಣ ನೀಡುವ ಮೂಲಕ ಈ ಸಂಸ್ಥೆ ಗ್ರಾಮೀಣ ಶಿಕ್ಷಣ ಕ್ಷೇತ್ರದಲ್ಲಿ ಮಾದರಿಯಾಗಿ ಬೆಳೆದಿದೆ."

■ ಬಾಪುಗೌಡ ಪಾಟೀಲ
ಅಧ್ಯಕ್ಷರು, ಶ್ರೀ ಅಪ್ಪಾಜಿ ಶಿಕ್ಷಣ ಸಂಸ್ಥೆ
ಗುಬ್ಬೇವಾಡ, ತಾ:ಸಿಂದಗಿ

---

# ಶಿವಾನಂದ ಪಾಟೀಲರಿಗೆ ಡಿಸಿಎಂ ಸ್ಥಾನ ನೀಡಿ : ಶಾಂತವೀರ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಸದ್ಯದ ರಾಜ್ಯ ರಾಜಕೀಯದಲ್ಲಿ ಬದಲಾವಣೆಯ ಪರ್ವ. ಮುಖ್ಯಮಂತ್ರಿ ಸಿದ್ದರಾಮಯ್ಯನವರ ರಾಜೀನಾಮೆಯಿಂದಾಗಿ ನೂತನ ಮುಖ್ಯಮಂತ್ರಿಗಳಾಗಿ ಡಿಕೆ ಶಿವಕುಮಾರ್ ಅವರು ಪ್ರಮಾಣ ವಚನ ಸ್ವೀಕರಿಸಿ ಮಂತ್ರಿ ಮಂಡಲ ವಿಸ್ತಾರವಾಗಲಿದೆ. ಉಪಮುಖ್ಯಮಂತ್ರಿಗಳ ಸ್ಥಾನಗಳು ಭರ್ತಿಯಾಗಲಿವೆ ಎಂಬ ಮಾತು ಎಲ್ಲೆಡೆ ಕೇಳಿ ಬರುತ್ತಿದೆ. ಒಂದೊಮ್ಮೆ ಉಪ ಮುಖ್ಯಮಂತ್ರಿಗಳ ಸ್ಥಾನ ನೀಡುವುದೇ ಆದಲ್ಲಿ ವಿಜಯಪುರ ಜಿಲ್ಲೆಗೆ ಪ್ರಥಮಾದ್ಯತೆ ಕೊಡಬೇಕು. ಅದರಲ್ಲೂ ವಿಶೇಷವಾಗಿ ಹಲವಾರು ಬಾರಿ ಶಾಸಕರಾಗಿ, ವಿವಿಧ ಖಾತೆಗಳನ್ನು ಯಶಸ್ವಿಯಾಗಿ ನಿಭಾಯಿಸಿ ಸೈ ಎನಿಸಿಕೊಂಡದ್ದಲ್ಲದೇ ಸಜ್ಜನ ರಾಜಕಾರಣಿ ಎಂದೇ ಪ್ರಚಲಿತವಾಗಿರುವ ಕೃಷಿ ಉತ್ಪನ್ನ ಮಾರುಕಟ್ಟೆ ಮತ್ತು ಜವಳಿ ಮತ್ತು ಸಕ್ಕರೆ ಸಚಿವರಾಗಿ ಕಾರ್ಯನಿರ್ವಹಿಸುತ್ತಿರುವ ಬಸವನ ಬಾಗೇವಾಡಿ ಕ್ಷೇತ್ರದ ಶಿವಾನಂದ ಪಾಟೀಲರನ್ನು ಉಪಮುಖ್ಯಮಂತ್ರಿ ಸ್ಥಾನಕ್ಕೆ ಆಯ್ಕೆ ಮಾಡಿ ಲಿಂಗಾಯತ ಪಂಚಮಸಾಲಿ ಸಮಾಜಕ್ಕೆ ಆದ್ಯತೆ ನೀಡಬೇಕೆಂದು ಸಿಂದಗಿ ಪುರಸಭೆ ಮಾಜಿ ಅಧ್ಯಕ್ಷ ಹಾಗೂ ಸಿಂದಗಿ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಶಾಂತವೀರ ಬಿರಾದಾರ ಸರಕಾರಕ್ಕೆ ಆಗ್ರಹಿಸಿದ್ದಾರೆ.

# ಕಮಕನೂರಗೆ ಪೂರ್ಣಾವಧಿಯ ಎಂಎಲ್‌ಸಿ ಮಾಡಲು ಡಿಗ್ಗಿ ಮನವಿ

ಕಲಬುರಗಿ: ಹಿಂದುಳಿದ ಕೋಲಿ ಸಮಾಜದ ಪ್ರಭಾವಿ ನಾಯಕರಾಗಿರುವ ತಿಪ್ಪಣ್ಣಪ್ಪ ಕಮಕನೂರ ಅವರನ್ನು ಪೂರ್ಣಾವಧಿಗಾಗಿ ವಿಧಾನ ಪರಿಷತ್ ಸದಸ್ಯರನ್ನಾಗಿ ನೇಮಕ ಮಾಡುವಂತೆ ಕಲ್ಯಾಣ ಕರ್ನಾಟಕ ಕೋಲಿ (ಗಂಗಾಮತ) ಸಮಾಜದ ಅಧ್ಯಕ್ಷ ಅಮೃತ ಎಚ್.ಡಿಗ್ಗಿ ಅವರು ಮನವಿ ಮಾಡಿದ್ದಾರೆ.

ನಗರದ ಪತ್ರಿಕಾ ಭವನದಲ್ಲಿ ನಿನ್ನೆ ಭಾನುವಾರ ಸುದ್ದಿಗೋಷ್ಠಿಯಲ್ಲಿ ಈ ವಿಷಯ ಕುರಿತು ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷದ ನಿಷ್ಠವಂತ ಕಾರ್ಯಕರ್ತ ಮತ್ತು ಮುಖಂಡರಾಗಿ ಹಲವು ದಶಕಗಳ ಕಾಲ ಕೆಲಸ ಮಾಡಿರುವ ಅವರು, ಹಿಂದುಳಿದ ಕೋಲಿ ಸಮಾಜದ ಧ್ವನಿಯಾಗಿ ಕಮಾಜದ ಕಲ್ಯಾಣ–ಕ್ಕಾಗಿ ಶ್ರಮಿಸುತ್ತಿದ್ದಾರೆ. ಅವರನ್ನು ಪೂರ್ಣಾವಧಿಯ ಆರು ವರ್ಷದ ಎಂ.ಎಲ್.ಸಿ ಸ್ಥಾನಕ್ಕೆ ನೇಮಕ ಮಾಡುವ ಮೂಲಕ ಕೋಲಿ ಸಮಾಜಕ್ಕೆ ಸಮಾಜಿಕ ನ್ಯಾಯ ಕಲ್ಪಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ.

ತಿಪ್ಪಣ್ಣಪ್ಪ ಕಮಕನೂರ ಅವರು, ತಮ್ಮ ಅಲ್ಪವಧಿಯ ಎಂ.ಎಲ್.ಸಿ ಅಧಿಕಾರವಧಿಯಲ್ಲಿ ಜನಪರ ಸೇವೆ ಸಲ್ಲಿಸಿದ್ದಾರೆ. ವಿಷೇಶವಾಗಿ ಕೋಲಿ ಸಮಾಜದ ಸಂಘಟನೆ ಮತ್ತು ಐಕ್ಯಾತೆಗಾಗಿ ದುಡಿಯುತ್ತಿದ್ದಾರೆ.

# ದೇಹ ಮತ್ತು ಮನಸ್ಸು ಬಲಿಷ್ಟವಾಗಿರಬೇಕು: ಪಿಎಸೈಜ್ಯೋತಿ

■ ಉದಯರಶ್ಮಿ ದಿನಪತ್ರಿಕೆ

ತಾಳಿಕೋಟೆ: ಮಾನವರಾದ ನಮ್ಮ ಜೀವನದಲ್ಲಿ ಎಲ್ಲದರಲ್ಲಿಯೂ ಯಶಸ್ವಿ ಕಾಣಬೇಕಾದರೆ ಮೊದಲು ದೇಹ ಬಲಿಷ್ಠವಾಗಿರಬೇಕು, ಅಂದರೆ ಮನಸ್ಸು ಕೂಡಾ ಬಲಿಷ್ಠವಾಗಿರುತ್ತದೆ ಎಂದು ಸ್ಥಳೀಯ ಪೋಲೀಸ್‌ಠಾಣೆಯ ಪಿಎಸ್‌ಐ ಶ್ರೀಮತಿ ಜ್ಯೋತಿ ಖೋತ್ ಅವರು ನುಡಿದರು.

ಮಂಗಳವಾರ ಸ್ಥಳೀಯ ಶ್ರೀ ಖಾಸ್ಗತೇಶ್ವರ ಮಠದ ಪೀಠಾಧಿಪತಿ ಸಿದ್ದಲಿಂಗದೇವರ ಜನ್ಮೋತ್ಸವ ಅಂಗವಾಗಿ ಸ್ಥಳೀಯ ಕ್ರೀಡಾ ಯುವ ಘಟಕ ಸಂಘಟನೆಯ ವತಿಯಿಂದ ಎಸ್‌ಕೆ ಹೈಸ್ಕೂಲ್ ಮೈದಾನದಲ್ಲಿ ಏರ್ಪಡಿಸಲಾದ ಸಿದ್ದಲಿಂಗದೇವರ ಪ್ರಿಮಿಯರ್ ಲೀಗ್ ಸಿಸನ್ 1(ಎಸ್‌ಪಿಎ) ಕ್ರಿಕೇಟ್ ಪಂದ್ಯಾವಳಿಯನ್ನು ರಿಬ್ಬನ್ ಕಟ್ ಮಾಡುವ ಮೂಲಕ ಉದ್ಘಾಟಿಸಿ ಸನ್ಮಾನ ಸ್ವೀಕರಿಸಿ ಮಾತನಾಡುತ್ತಿದ್ದ ಅವರು, ತಾಳಿಕೋಟೆಯ ಶ್ರೀ ಖಾಸ್ಗತೇಶ್ವರ ಮಠವು ರಾಜ್ಯದ ಪ್ರಮುಖ ಮಠಗಳಲ್ಲಿ ಒಂದಾಗಿದ್ದು ಶ್ರೀ ಮಠದ ಶ್ರೇಯಸ್ಸು ಘನತೆಯನ್ನು ಹೆಚ್ಚಿಸುತ್ತಾ ಸಾಗಿದ ಮಠದ ಪೀಠಾದಿಪತಿ ಸಿದ್ದಲಿಂಗದೇವರ ಜನ್ಮದಿನೋತ್ಸವ ಅಂಗವಾಗಿ ಇಂದು ಏರ್ಪಡಿಸಲಾದ ಕ್ರೀಕೆಟ್ ಕ್ರೀಡಾಕೂಟವು ಜನಮನ ರಂಜಿಸುವಂತಾಗಲಿ ಎಂದು ಶುಭಹಾರೈಸಿದರು.

### ರವಿವಾರ ಸಮಾರೋಪ

ಜೂ. 2 ರಂದು ಉದ್ಘಾಟನೆಗೊಂಡ ಕ್ರಿಕೆಟ್ ಕ್ರೀಡಾಕೂಟದಲ್ಲಿ ತಾಳಿಕೋಟೆ ಪಟ್ಟಣ ಒಳಗೊಂಡು ಗ್ರಾಮೀಣ ವಲಯ ಒಳಗೊಂಡು 8 ಟೀಮ್‌ಗಳು ಭಾಗವಹಿಸಿದ್ದು ಬರಲಿರುವ ದಿ. 7 ರವಿವಾರರಂದು ಶ್ರೀ ಸಿದ್ದಲಿಂಗದೇವರ ಜನ್ಮದಿನದಂದು ಕ್ರೀಡಾಕೂಟ ವಿಜೇತ ತಂಡದವರಿಗೆ ಬಹುಮಾನ ವಿತರಿಸುವ ಕಾರ್ಯದೊಂದಿಗೆ ಮಂಗಲಗೊಳ್ಳಲಿದೆ.



ಮುಖ್ಯ ಅತಿಥಿಗಳಾಗಿ ಆಗಮಿಸಿದ ಭಾರತೀಯ ಜನತಾಪಕ್ಷದ ಮಾಜಿ ಜಿಲ್ಲಾಧ್ಯಕ್ಷ ಆರ್.ಎಸ್. ಪಾಟೀಲ(ಕೂಚಬಾಳ) ಅವರು ಮಾತನಾಡಿ, ಭಾರತ ದೇಶವು ಜ್ಞಾನ ವಿಜ್ಞಾನವನ್ನು ಎಲ್ಲವನ್ನು ಕೊಟ್ಟಿದೆ. ಅಂತಹದರಲ್ಲಿ ತಾಳಿಕೊಟೆಯ ನಗರದಲ್ಲಿಯ ಖಾಸ್ಗತ ಮಠದ ಸಿದ್ದಲಿಂಗದೇವರ ನಡೆನುಡಿ ಅವರ ಆಶೀರ್ವಚನವನ್ನು ಕೇಳಿದ ಎಲ್ಲ ಭಕ್ತಸಮೂಹ ಮೆಚ್ಚುಗೆ ಪಡುತ್ತಾ ಸಾಗಿದ್ದಾರೆ. ಅಂತಹ ಶ್ರೀಗಳ ಜನ್ಮೋತ್ಸವ ಕುರಿತು ಯುವಕರ ತಂಡ ಕ್ರಿಕೇಟ್ ಕ್ರೀಡಾಕೂಟವನ್ನು ಏರ್ಪಡಿಸಿ ಶ್ರೀಗಳ ಹೆಸರನ್ನು ಇನ್ನೂ ಉತ್ತುಂಗಕ್ಕೇರಿಸುವ ಕಾರ್ಯ ಮಾಡಿರುವದು ಸಂತಸದಾಯಕ ಸಂಗತಿಯಾಗಿದೆ ಎಂದರು.

ನಿವೃತ್ತ ಶಿಕ್ಷಕ ಬಸವರಾಜ ಕೊಡಗಾನೂರ ಅವರು ಮಾತನಾಡಿದರು.

ಶ್ರೀ ಖಾಸ್ಗತೇಶ್ವರ ಮಠದ ಉಸ್ತುವಾರಿ ಮುರುಘೇಶ ವಿರಕ್ತಮಠ ಸಾನಿದ್ಯ ವಹಿಸಿದ್ದರು.

ಗಣ್ಯರಾದ ಶರಣಗೌಡ ಹೆಗರಡ್ಡಿ, ಬಸವರಾಜ ಕುಂಬಾರ, ಜಯಸಿಂಗ್ ಮೂಲಿಮನಿ, ಎನ್.ಎಸ್. ಸರಶೆಟ್ಟಿ, ಪ್ರಭುಗೌಡ ಮದರಕಲ್ಲ, ಕಾಶೀನಾಥ ಮುರಾಳ, ಎಂ.ಆರ್. ಕತ್ತಿ, ಜಯಭೀಮ ಮುತ್ತಗಿ, ಮಹಾಂತೇಶ ವಾಲಿ, ವಿರೇಶ ಸಾಸನೂರ, ರಾಜೇಶ ಹಜೇರಿ, ಸನರಾಜ್ ಪಾಟೀಲ, ಕಿರಣ್ ಕತ್ತಿ ಮೊದಲಾದವರು ಉಪಸ್ತಿತರಿದ್ದರು.

# 5 ರಂದು ಪ್ರೊ.ಮಲ್ಲೇಪುರಂ ಸಾಹಿತ್ಯ ಪ್ರಶಸ್ತಿ ಪ್ರದಾನ



ಕಲಬುರಗಿ: ಮಲ್ಲೇಪುರಂ ಸಾಂಸ್ಕೃತಿಕ ಪ್ರತಿಷಾಟನ(ರಿ.) ಕಲಬುರಗಿ ಮತ್ತು ದಲಿತ ಸಾಹಿತ್ಯ ಪರಿಷತ್ತು(ರಿ) ಜಿಲ್ಲಾ ವಿಜಯಪುರ ಸಹಯೋಗದಲ್ಲಿ 'ಪ್ರೊ. ಮಲ್ಲೇಪುರಂ ಸಾಹಿತ್ಯ ಪ್ರಶಸ್ತಿ ಪ್ರದಾನ' ಮತ್ತು 'ವಿಶೇಷೆ ಉಪನ್ಯಾಸ' ಕಾರ್ಯಕ್ರಮವನ್ನು ಜೂನ್ 5ರಂದು ವಿಜಯಪುರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಪ್ರೊ. ಮಲ್ಲೇಪುರಂ ಜಿ. ವೆಂಕಟೇಶ ಬಹುಶ್ರುತ ವಿದ್ವಾಂಸರು. ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿಗಳಾಗಿ, ಶಾಸ್ತ್ರಚೂಡಾಮಣಿ ಎಂದು ಖ್ಯಾತರಾದವರು. ಕನ್ನಡ–ಪಾಲಿ–ಪ್ರಾಕೃತ–ಸಂಸ್ಕೃತದಲ್ಲಿ ಆಳವಾದ ಜ್ಞಾನ ಪಡೆದು ನಾಡಿನ ಸಾಕ್ಷಿ ಪ್ರಜ್ಞೆಯಂತಿರುವ ಅವರಿಗೆ ಈಗ 75ರ ಹುಟ್ಟುಹಬ್ಬ, ಕುವೆಂಪು ಭಾಷಾಭಾರತಿ ಪ್ರಾಧಿಕಾರದ ಅಧ್ಯಕ್ಷರಾದ ಡಾ. ಚನ್ನಪ್ಪ ಕಟ್ಟಿಯವರು, ಹಿರಿಯ ಸಾಹಿತಿಗಳಾದ ಡಾ. ಕೃಷ್ಣಗೊಲ್ಲಾರ ಕುಲಕರ್ಣಿ, ಡಾ. ಮಹಾಂತೇಶ ಬಿರಾದಾರ, ಸ್ವಾನ್ ಕೃಷ್ಣಮೂರ್ತಿ ಎಂ. ಧಾರವಾಡದ ಡಾ. ನಿಂಗಪ್ಪ ಮುದೇನೂರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಜೊತೆಗೆ ಪ್ರೊ. ಮಲ್ಲೇಪುರಂ ಜಿ. ವೆಂಕಟೇಶ ಅವರು ಉಪಸ್ಥಿತರಿರುವರು.

ಪ್ರೊ. ಮಲ್ಲೇಪುರಂ ಸಾಂಸ್ಕೃತಿಕ ಪ್ರತಿಷಾನದಿಂದ 2013 ರಿಂದ 'ಪ್ರೊ. ಮಲ್ಲೇಪುರಂ ಸಾಹಿತ್ಯ ಪ್ರಶಸ್ತಿ'ಯನ್ನು ನೀಡುತ್ತ ಬರಲಾಗುತ್ತಿದೆ. ಇಲ್ಲಿಯವರೆಗೆ ಪ್ರೊ. ಎ.ವಿ. ನಾವಡ, ಮಂಗಳೂರು (2013), ಡಾ. ಮೂಡ್ನಾಕೂಡು ಚಿನ್ನಸ್ವಾಮಿ, ಬೆಂಗಳೂರು(2014), ಪ್ರೊ. ವಿ.ಜಿ. ಪೂಜಾರ, ಕಲಬುರಗಿ(2015), ಪ್ರೊ. ನೀಲಗಿರಿ ತಳವಾರ, ಮೈಸೂರು(2016), ಡಾ. ಹನುಮಾಕ್ಷಿ ಗೋಗಿ, ಹುಬ್ಬಳ್ಳಿ(2017), ಡಾ. ಅರ್ಜುನ ಗೊಳಸಂಗಿ, ಗದಗ(2018), ಡಾ. ಬಿ.ವಿ. ವಸಂತಕುಮಾರ, ಮೈಸೂರು(2020), ಡಾ. ಎಚ್.ಜಿ. ಶ್ರೀಧರ, ಪುತ್ತೂರು(2021), ಡಾ. ಕೆ. ಶಾರದಾ, ಕುಪ್ಪಂ, ಆಂಧ್ರಪ್ರದೇಶ(2022), ಡಾ. ಎಸ್. ಎಚ್. ಗೋವರ್ಧನ, ಬೆಂಗಳೂರು(2023), ಡಾ. ತಮಿಳ್ ಸೆಲ್ವಿ, ಚೆನ್ನೈ(2024) ಅವರಿಗೆ ಪ್ರಶಸ್ತಿ ನೀಡಲಾಗಿದೆ.

2025 ನೇ ಸಾಲಿನ ರಾಜ್ಯಮಟ್ಟದ 'ಪ್ರೊ. ಮಲ್ಲೇಪುರಂ ಸಾಹಿತ್ಯ ಪ್ರಶಸ್ತಿ' ಗೆ ತಾಳಿಕೋಟಿಯ ಎಸ್.ಕೆ. ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕಿ ಹಾಗೂ ಕನ್ನಡ ವಿಭಾಗದ ಮುಖ್ಯಸ್ಥರಾದ ಡಾ. ಸುಜಾತಾ ಚಲವಾದಿ ಅವರು ಭಾಜನರಾಗಿದ್ದಾರೆ. ಜೂನ್ 5ರಂದು ವಿಜಯಪುರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಹಮ್ಮಿಕೊಳ್ಳಲಾದ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪುರಸ್ಕೃತರಾದ ಡಾ.ಸುಜಾತಾ ಚಲವಾದಿಯವರಿಗೆ 10,000/– ನಗದು, ಫಲಪುಷ್ಪ ನೀಡಿ ಪ್ರಶಸ್ತಿ ಪ್ರದಾನ ಮಾಡಲಾಗುವುದೆಂದು ಪ್ರೊ. ಮಲ್ಲೇಪುರಂ ಸಾಂಸ್ಕೃತಿಕ ಪ್ರತಿಷಾನದ ಅಧ್ಯಕ್ಷರಾದ ಡಾ. ಎಂ. ನಾಗರಾಜ ಅವರು ಪತ್ರಿಕಾ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ಮುಳ್ಳಿನ ಹಾದಿಯಲಿ ಹೂ ನಗೆಯ ಪಯಣ



**ಜಯ್ ನುಡಿ**

**(ವ್ಯಕ್ತಿತ್ವ ವಿಕಸನ ಕುರಿತು ಲೇಖನ ಮಾಲಿಕೆ)**

■ ಉದಯರಶ್ಮಿ ದಿನಪತ್ರಿಕೆ

'ಸುಖದ ಕಡಲಲಿ ಹೊರಟರೆ ಕಷ್ಟದಲೆಗಳು ಎದುರಾಗುವುದೆ? ನೋವಿನ ಮಳೆಯಲಿ ನೆನೆದು ಹೋದರೆ ನಾಳಿನ ಹಗಲು ಮೂಡುವುದೇ? ಇವು ಕವಿ ಕೆಎಸ್‌ಎನ್‌ರವರ ಕವಿತೆಯ ಸುಂದರ ಸಾಲುಗಳು ಬದುಕಿನ ಸತ್ಯವನ್ನು ಅತ್ಯಂತ ಮಾರ್ಮಿಕವಾಗಿ ಉಲ್ಲೇಖಿಸಿವೆ. ಬದುಕು ನಿತ್ಯವೂ ನಮಗೆ ಹೊಸ ಹೊಸ ಪಾಠಗಳನ್ನು ಕಲಿಸುತ್ತಲೇ ಇರುತ್ತದೆ. ಅಷ್ಟೆ ಅಲ್ಲ ಅದು ನಾವು ಕಲಿಯುವವರೆಗೂ




ಬಿಡದೇ ಇರುವ ಗುರು. ಕಷ್ಟಗಳೇ ಹೆಚ್ಚು ಕಲಿಸುತ್ತೇವೆ ಎಂಬುದು ಅಚ್ಚರಿಯೆನಿಸಿದರೂ ನಂಬಲೇಬೇಕು. ಕಷ್ಟಗಳಿಲ್ಲದೇ ಸುಖದ ಸವಿ ತಿಳಿಯಲು ಸಾಧ್ಯವಿಲ್ಲ. ಇದನ್ನೇ ಸಮಾಜ ಸೇವಕಿ ಸುಧಾ ಮೂರ್ತಿ. 'ಜೀವನದಲ್ಲಿ ಕಷ್ಟಗಳು ಬರುವುದು ಸಹಜ. ಆದರೆ ಆ ಕಷ್ಟಗಳನ್ನು ನಾವು ಹೇಗೆ ಎದುರಿಸುತ್ತೇವೆ ಮತ್ತು ಅದರಿಂದ ಏನು ಕಲಿಯುತ್ತೇವೆ ಎಂಬುದು ಮುಖ್ಯ.' ಎಂದಿದ್ದಾರೆ

**ಹೂ ನಗೆ**

ಇವತ್ತೇನೋ ಹೀಗಾಯ್ತು. ನಾಳೆ ಆದರೂ ಚೆನ್ನಾಗಿರುತ್ತದೆ ಅಂ–ದರೆ ಮತ್ತೆ ಯಾವುದಾದರೊಂದು ಸಮಸ್ಯೆ ಒಕ್ಕರಿಸಿಕೊಂಡೇ ಬಿಡುತ್ತದೆ.



ದಿನಾಲೂ ತೊಂದರೆ ತಾಪತ್ರಯಗಳು ಇದ್ದೇ ಇರುತ್ತವೆ. ಈ ಕಷ್ಟದ ಹಾದಿಯಲ್ಲಿ ಸುಖದ ಬದುಕನ್ನು ಪಡೆಯುವುದು ಅಸಾಧ್ಯವೆಂದು ಅನೇಕರು ನಿತ್ಯ ಅಳುತ್ತಲೇ ಇರುತ್ತಾರೆ. 'ಕಣ್ಣೀರು ಹಾಕುವುದಕ್ಕಿಂತ, ಧೈರ್ಯದಿಂದ ಎದುರಿಸುವುದೇ ನಿಜವಾದ ಶೌರ್ಯ.' ಎಂದು ತಿಳಿದವರು ಮಾತ್ರ ಕತ್ತಲೆಯ ದಾರಿಯಲ್ಲೂ ಬೆಳಕನ್ನು ಕಾಣುತ್ತಾರೆ. ತಿಳಿದವರಂತೆ ನಾವೂ ತಿಳಿದವರಾಗಿ ಮುಳ್ಳುಗಳಂತಿರುವ ಕಷ್ಟಗಳನ್ನು ಹೂನಗೆ ಬೀರಿ ಎದುರಿಸುವುದು ಹೇಗೆ ತಿಳಿಯೋಣ ಬನ್ನಿ.

**ಮೆಟ್ಟಿಲು**

ನಾವು ತಿಳಿದಂತೆ ಕಷ್ಟಗಳು ನಮ್ಮನ್ನು ಪಾತಾಳಕ್ಕೆ ಇಳಿಸಲು ಬರುವುದಿಲ್ಲ. ನಮ್ಮ ಪ್ರತಿಭೆಯನ್ನು ಕುಗ್ಗಿಸಲೂ ಬರುವುದಿಲ್ಲ. ಬದಲಿಗೆ ನಮ್ಮಲ್ಲಿ ಅಡಗಿರುವ ಅಗಾಧ ಶಕ್ತಿಯನ್ನು ಹೊರಗೆಳೆಯಲು ಬರುತ್ತವೆ ಎಂಬುದನ್ನು ತಿಳಿಯಬೇಕು. ಶಾಂತ ಸಮುದ್ರ ಉತ್ತಮ ನಾವಿಕನಾಗಬೇಕು ಎನ್ನುವವನಿಗೆ ತರಬೇತಿ ನೀಡಲಾರದು. ಅಲೆಗಳು ಅಬ್ಬರವಿದ್ದಾಗ ಮಾತ್ರ ನಾವಿಕ ತನ್ನ ನೈಪುಣ್ಯತೆಯನ್ನು ಒರಗೆ ಹಚ್ಚಬಲ್ಲ. ಹಾಗೆಯೇ ಸುಖದ ಸಂದರ್ಭದಲ್ಲಿ ನಮ್ಮೊಳಗಿರುವ ಬುದ್ಧಿವಂತಿಕೆ, ಜಾಣತನ ಹೊರಗೆ ಬಾರವು. ಆದರೆ ಸಂಕಷ್ಟ ಸಮಯವು ನಮ್ಮಲ್ಲಿರುವ ಸಹನೆಯನ್ನು ಜಾಣ್ಮೆಯನ್ನು ಎತ್ತಿ ತೋರಿಸಲು ನೆರವಿಗೆ ಬರುತ್ತದೆ. ಹೀಗಾಗಿಯೇ ಕಷ್ಟ ಬದುಕಿನ ನಿಜವಾದ ಪಾಠಶಾಲೆ ಆಗುತ್ತದೆ. ಕಷ್ಟದ ಪಾಠಶಾಲೆಯಲ್ಲಿ ಅತ್ಯಮೂಲ್ಯ ಪಾಠಗಳನ್ನು ಶ್ರದ್ಧೆಯಿಂದ ಕಲಿತಷ್ಟು ಬದುಕು ಸರಳವಾಗುತ್ತದೆ. ಕಷ್ಟಗಳನ್ನು ಶಾಪವೆಂದು ಭಾವಿಸದೆ ಬದುಕನ್ನು ಉನ್ನತಿಗೇರಿಸುವ ಮೆಟ್ಟಿಲುಗಳೆಂದು ತಿಳಿಯಬೇಕು.

**ಆತ್ಮವಿಶ್ವಾಸ**



ರಾಷ್ಟ್ರಕವಿ ಜಿಎಸ್‌ಎಸ್ ತಮ್ಮ ಕವಿತೆಯ ಸಾಲುಗಳಲ್ಲಿ ಹೀಗೆ ಹೇಳಿದ್ದಾರೆ. 'ಎಲ್ಲಾ ಕಳೆಯಲಿ ಎಲ್ಲಾ ಅಳಿಯಲಿ, ಹರಡಲಿ ಕತ್ತಲೆ ಜಗದ ತುಂಬ; ನನ್ನೀ ಎದೆಯೊಳಗಿನ ಪ್ರೀತಿಯ ದೀಪವ ನಂದಿಸಲಾರದು ಯಾವುದೇ ಬಿರುಗಾಳಿ.' ಧುತ್ತೆಂದು ಕಷ್ಟಗಳು ಎದುರಾದಾಗ ಭಯಗೊಳ್ಳದೆ ಭಯವನ್ನು ಮೆಟ್ಟಿ ನಿಲ್ಲಬೇಕೆಂದು ಈ ಸಾಲುಗಳು ಸಾರುತ್ತಿವೆ. ಹಲವು ಸಲ ನಾವೇ ತಂದುಕೊಂಡ ಕಷ್ಟಗಳು ಆಗಿರುತ್ತವೆ. ಕಷ್ಟಗಳು ಯಾವ ರೀತಿಯಲ್ಲಿದ್ದರೂ ನಮಗೆ ಭಯ ಬೀಳಿಸುತ್ತವೆ. ಅಂಥ ಸಮಯದಲ್ಲಿ ಆತ್ಮವಿಶ್ವಾಸವೇ ನಮಗಿರುವ ದೊಡ್ಡ ಆಯುಧ. ನಮ್ಮ ಕಷ್ಟಗಳಿಗೆ ಇತರರನ್ನು ಹೊರೆಯಾಗಿಸಲು ಪ್ರಯತ್ನಿಸಬಾರದು. ಅದನ್ನು ಮೆಟ್ಟಿ ನಿಲ್ಲುವ ಹೊಣೆ ನಮ್ಮದೇ ಎಂದು ತಿಳಿಯಬೇಕು. ಸ್ವಂತ



ಪ್ರಯತ್ನದಿಂದ ಅದನ್ನು ಮೂಲೆಗುಂಪು ಮಾಡಬೇಕು. ಆತ್ಮವಿಶ್ವಾಸವು ನಮಗೆ ರಕ್ಷಣಾ ಕವಚವಾಗಿ ಕೆಲಸ ಮಾಡಬೇಕು. ಆದ್ದರಿಂದ ಕಷ್ಟದ ಹಾದಿಯಲ್ಲಿರುವಾಗ ಭಯದ ಬೆನ್ನೆಲಬು ಮುರಿಯಬೇಕು. ವಿಶ್ವಾಸದಿಂದ ಮುನ್ನುಗ್ಗಬೇಕು.

**ಮನೋಧೈರ್ಯ**

ಬದುಕಿನ ಹಾದಿಯಲ್ಲಿ ಸಾಗುವಾಗ ಎದುರಾಗುವ ಕಾಲೆಳುವ ಎದುರಾಳಿಗಳೇ ನಮ್ಮನ್ನು ಎತ್ತರಕ್ಕೆ ಬೆಳೆಸುತ್ತವೆ ಎಂಬುದನ್ನು ನೆನಪಿಡಬೇಕು. ಇದಕ್ಕೆ ಪೂರಕವಾಗಿ ಉದ್ಯಮಿ ಹೆನ್ರಿ ಫೋರ್ಡ್ ಅವರ ಉಲ್ಲೇಖವೊಂದು ಹೀಗಿದೆ: ' ಎಲ್ಲವೂ ನಿಮಗೆ ವಿರುದ್ಧವಾಗಿ ನಡೆಯುತ್ತಿರುವಂತೆ ಅನಿಸಿದಾಗ ನೆನಪಿಡಿ, ವಿಮಾನವು ಗಾಳಿಯ ದಿಕ್ಕಿಗೆ ಎದುರಾಗಿಯೇ ಟೇಕ್–ಆಫ್ ಆಗುತ್ತದೆ, ಗಾಳಿಯ ಹೊತೆಗಲ್ಲ.' ಬದುಕು ಬದಲಾಗುವುದು ನಮ್ಮ ಆಲೋಚನೆಗಳಿಂದ ಹೊರತು ಪರಿಸ್ಥಿತಿಯಿಂದಲ್ಲ.. ಕಷ್ಟದ ಕಡೆ ನೋಡಿ ಅಂಜಿದರೆ ಕಡ್ಡಿಯಂತಿದ್ದ ಕಷ್ಟ ಗುಡ್ಡದಂತೆ ಕಾಣಿಸುತ್ತದೆ. ಎಷ್ಟೇ ಕಠಿಣ ಸಮಸ್ಯೆ ಎದುರಾದರೂ ಅದನ್ನು ನೋಡುವ ನಮ್ಮ ದೃಷ್ಟಿಕೋನವು ಧನಾತ್ಮಕವಾಗಿದ್ದರೆ ಅದಕ್ಕೆ ಅರ್ಧ ಪರಿಹಾರ ಸಿಕ್ಕಂತೆಯೇ ಸರಿ. ಇದರರ್ಥ ಇಷ್ಟೆ ಧೈರ್ಯ ಕಳೆದುಕೊಂಡರೆ ಕಷ್ಟ ನಮ್ಮ ಬೆನ್ನಟ್ಟುವುದು. ಅದೇ ಧೈರ್ಯದಿಂದ ಎದುರಿಸಿದರೆ ಬಾಲ ಮುದುರಿಕೊಂಡು ಬೀಳುವುದು. ಹೀಗಾಗಿ ಕಷ್ಟದ ಸಮಯದಲ್ಲಿ ಮಾನಸಿಕ ಸ್ಥಿರತೆ ಕಾಯ್ದುಕೊಳ್ಳುವುದು ಮೊದಲ ಆದ–್ಯತೆಯಾಗಬೇಕು ಮನೋಧೈರ್ಯವೊಂದು ಜತೆಗಿದ್ದರೆ ಬೆಟ್ಟದಂತೆ ಕಾಣುವ ಕಷ್ಟ ಹಿಮದಂತೆ ಕರಗುವುದು..

**ಪುಟ್ಟ ಹೆಜ್ಜೆ**

ಕಷ್ಟ ಹೇಳಿ ಕೇಳಿ ಬರದು. ಅದು ಅಚಾನಾಕ್ಕಾಗಿ ಮುಂದೆ ಬಂದು ನಿಲ್ಲುತ್ತದೆ. ಅಂತಹ ಸಂದರ್ಭದಲ್ಲಿ ಮುಂದಿನ ದಿನಗಳ ಬಗ್ಗೆ ಚಿಂತಿಸುತ್ತ ಗಾಬರಿಯಿಂದ ಅಯ್ಯೋ! ನನ್ನ ಜೀವನವೇ ಮುಗಿದು ಹೋಯಿತೆಂದು ರೋಧಿಸಬಾರದು. ಪ್ರಸಿದ್ಧ ಬಾಕ್ಸರ್ ಮೊಹಮ್ಮದ ಅಲಿ ಅವರ ಮಾತಿನಂತೆ; 'ದಿನಗಳನ್ನು ಎಣಿಸಬೇಡಿ, ದಿನಗಳು ಹೆಮ್ಮೆ ಪಡುವಂತೆ ಮಾಡಿ.' ಇದನ್ನು ಹೇಗೆ ಪರಿಹರಿಸಬೇಕೆಂದು ಯೋಚಿಸುವುದರ ಜೊತೆಗೆ ಯೋಜಿಸಬೇಕು. ಕಷ್ಟವನ್ನು ಮಣೆ ಹಾಕಿ ಕೂರಿಸದೇ ಪರಿಹಾರವನ್ನು ಸಣ್ಣ ಸಣ್ಣ ಭಾಗಗಳಾಗಿ ವಿಂಗಡಿಸಬೇಕು ಯೋಜನಾಬದ್ಧ ಪುಟ್ಟ ಪುಟ್ಟ ಹೆಜ್ಜೆಗಳು ದಿನಗಳದಂತೆ ಪರಿಹಾರದ ದಾರಿಯನ್ನು ತೋರಬಲ್ಲವು. ದಿನಕ್ಕಿಷ್ಟು ಅಂತ ಹೆಜ್ಜೆಗಳನ್ನಿಡುತ್ತ ಕಷ್ಟವನ್ನು ಬಗ್ಗು ಬಡಿಯಬೇಕು.

**ಸಹನೆ**

ಮಹಾನ್ ನಾಯಕ ನೆಲ್ಸನ್ ಮಂಡೇಲಾ ಅವರು ಹೇಳಿದ ಹಾಗೆ, 'ನಾನು ಎಂದಿಗೂ ಸೋಲುವುದಿಲ್ಲ. ಒಂದೋ ನಾನು ಗೆಲ್ಲುತ್ತೇನೆ, ಇಲ್ಲವೆ ಕಲಿಯುತ್ತೇನೆ.' ಸಂಕಷ್ಟಗಳನ್ನು ಆತುರಾತುರದಲ್ಲಿ ಪರಿಹರಿಸಲು ಹೋಗಿ ಸೋಲಿನ ಮನೆಯಲ್ಲಿ ಶಾಶ್ವತವಾಗಿ ಇದ್ದು ಬಿಡಬಾರದು. ಈಗಿನ ಡಿಜಿಟಲ್ ದುನಿಯಾದಲ್ಲಿ ನಮಗೆ ಎಲ್ಲವೂ ಇನಸ್ಟಂಟ್ ಆಗಿ ಸಿಗುತ್ತದೆ. ಆದ್ದರಿಂದ ನಾವು ನೋಡನೋಡುತ್ತಲೇ ಕಷ್ಟ ಕರಗಿ ಸುಖವಾಗಬೇಕೆಂದು ಅವಸರಿಸುತ್ತೇವೆ. ಆದರೆ, ಅವಸರವೇ ಅಪಘಾತಕ್ಕೆ ಕಾರಣ ಎಂಬ ಮಾತಿನಂತೆ ಆತುರತೆಯು ಪರಿಸ್ಥಿತಿಯನ್ನು ಮತ್ತಷ್ಟು ಬಿಗಡಾಯಿಸುತ್ತದೆ. ಅವಸರದ ಹಾದಿ ಬಿಟ್ಟು ಸಹನೆಯ ಹಾದಿಯನ್ನು ಆಯ್ಕೆ ಮಾಡಿಕೊಳ್ಳಬೇಕು. ಕಲ್ಲು ಉಳಿಯ ಪೆಟ್ಟು ಸಹಿಸಿದಾಗಲೇ ಪೂಜಿಸಲ್ಪಡುವ ಮೂರ್ತಿಯಾಗಲು ಸಾಧ್ಯ. ಕಲ್ಲು ಕೆಲ ಕಾಲ ಕಷ್ಟವನ್ನು ಸಹಿಸಿದರೆ ಮಾತ್ರ ಸುಂದರ ಶಿಲೆಯಾಗಿ ಅರಳಲು ಸಾಧ್ಯ. ಅಂತೆಯೇ ಕೆಲ ಸಮಯದ ಕಷ್ಟವೆಂದು ತಿಳಿದು ತಾಳ್ಮೆಯಿಂದ ನಿರ್ವಹಿಸಬೇಕು. ಎಂಥ ಘೋರ ಕತ್ತಲಾದರೂ ಇರುಳಿನಲ್ಲಿ ಮಾತ್ರ ಅದರ ಪಾತ್ರ. ಅದರ ಸಮಯ ಮುಗಿಯುತ್ತಿದ್ದಂತೆ ಮುಂಜಾನೆಯ ನೇಸರನ ಬೆಳಕಿಗೆ ದಾರಿ ಮಾಡಿಕೊಡಲೇಬೇಕು. ಸಹನೆಯೊಂದಿದ್ದರೆ ಸಕಲ ವಿಜಯವೂ ನಮ್ಮದೇ. ಅಂತೆಯೇ ಕಷ್ಟಗಳು ನಮ್ಮನ್ನು ಬದುಕಿನ ಸವಾಲುಗಳಿಗೆ ಹದಗೊಳಿಸುತ್ತವೆ ಸುಖಗಳಿಗೆ ದಾರಿ ಮಾಡಿಕೊಡುತ್ತವೆ ಎಂಬುದನ್ನು ಮರೆಯುವಂತಿಲ್ಲ.

**ನಮ್ಮೊಳಗೇ ಇದೆ**

ಕಸ್ತೂರಿ ಮೃಗವು ಸುವಾಸನೆ ಎಲ್ಲಿಂದ ಬರುತ್ತಿದೆ ಎಂದು ಇಡೀ ಕಾಡನ್ನು ಹುಡುಕುತ್ತದೆ. ವಾಸ್ತವದಲ್ಲಿ ಸುವಾಸನೆ ಅದರ ನಾಭಿಯಲ್ಲೇ ಇರುತ್ತದೆ. ಹಾಗೆಯೇ ಕಷ್ಟಕ್ಕೆ ಪರಿಹಾರವನ್ನು ಅಲ್ಲಿ ಇಲ್ಲಿ ಹೊರಗೆ ಹುಡುಕುತ್ತ ದೇವರ ಕಾಣಿಕೆಯಾದ ಬದುಕನ್ನು ಹಾಳು ಮಾಡಿ ಬಿಡುತ್ತೇವೆ. ಕಷ್ಟಗಳನ್ನು ಎದುರಿಸುವ ಶಕ್ತಿ ನಮ್ಮೊಳಗೇ ಇದೆ ಎಂಬುದನ್ನು ತಿಳಿಯಬೇಕು. ಸಹನೆಯ ಹಾದಿಯಲ್ಲಿ ಭರವಸೆಯ ಹಣತೆ ಹಚ್ಚಿ ಧೈರ್ಯದಿಂದ ಮುನ್ನುಗ್ಗಬೇಕು. ಆಗ ಕಷ್ಟಗಳೆಂಬ ಮುಳ್ಳುಗಳ ಹಾದಿಯಲ್ಲೂ ಮುಗುಳ್ನಗುತ್ತ ಪಯಣಿಸಬಹುದು. ಇತಿಹಾಸದ ಪುಟದಲ್ಲಿ ಜಾಗ ಪಡೆದು ಹೊಸದೊಂದು ಇತಿಹಾಸ ಸೃಷ್ಟಿಸಬಹುದು.

ಲೇಖನ
■ ಜಯಶ್ರೀ.ಜೆ. ಅಬ್ಬಿಗೇರಿ
ಇಂಗ್ಲೀಷ್ ಉಪನ್ಯಾಸಕರು
ಬೆಳಗಾವಿ
ಮೊ: 9449234142



## ನರಸಿಂಗರಾವ್ ಹೇಮನೂರಗೆ ಗೃಹ ಸನ್ಮಾನ



ಕಲಬುರಗಿ: ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಆಯೋಜಿಸಿದ ಜಿಲ್ಲಾ ಪ್ರಥಮ ಕವಿ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಆಯ್ಕೆಯಾದ ಹಿರಿಯ ಸಾಹಿತಿ ನರಸಿಂಗರಾವ ಹೇಮನೂರ್ ಮತ್ತು ಸಾವಿತ್ರಿ ನರಸಿಂಗರಾವ್ ಹೇಮನೂರ ದಂಪತಿಗಳಿಗೆ ವಿಶ್ವಕರ್ಮ ಸಮಾಜದ ಧು–ರೀಣ ಅರವಿಂದ ಪೊದ್ದಾರ ಬೆಣ್ಣೆಶಿರೂರ ಅವರ ನೇತೃತ್ವದಲ್ಲಿ ಗೃಹ ಸನ್ಮಾನ ನೇರವೇ–ರಿತು.ಹಿರಿಯರಾದ ಲಚಪ್ಪ ಪತ್ತಾರ್, ಈರಣ್ಣ ಪೊದ್ದಾರ, ಸುಭಾಸ್ ಪೊದ್ದಾರ್, ರಘುನಾಥ್ ಪೊದ್ದಾರ್, ಪ್ರಭಾಕರ ಪೊದ್ದಾರ, ಜನಾರ್ದನ, ಸುರೇಶ್ ಯಡ್ರಾಮಿ,ಈರಣ್ಣ ಪತ್ತಾರ, ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು.ಕಾರ್ಯಕ್ರಮದ ದಲ್ಲಿ ಗಂಗಾಧರ್ ಪತ್ತಾರ ಗಣಪತಿ ಪೊದ್ದಾರ , ಸುರೇಶ್ ಮಾಡ್ಯಾಳ,ಮಾಹಾಂತೇಶ ಬಳೂರ್ಗಿ, ತುಕಾರಾಮ ಪೊದ್ದಾರ, ಚಂದ್ರಶೇಖರ ಪೊದ್ದಾರ, ನಾಗರಾಜ ಪೊದ್ದಾರ, ಮೌನೇಶ್ ಬೆಣ್ಣಿಶಿರೂರ, ವಿಠಲ ಪತ್ತಾರ ತಾಂಬಾ,ಕಮಲಬಾಯಿ ಮಹಾದೇವ , ಚಂದ್ರಕಲಾ ಲಕ್ಷ್ಮಣ, ಭಾಗೀರತಿ ಸುಭಾಷ್ , ಕಮಲಾಬಾಯಿ ಈರಣ್ಣ, ಸಾವಿತ್ರಿ ಅರವಿಂದ, ಜಯಶ್ರೀ ಕುಸಪ್ಪ , ಕಾಮಾಕ್ಷಿ ಮೌನೇಶ್ , ನಾಗವೇಣಿ ಗಂಗಾಧರ್, ಸೌಭಾಗ್ಯ ಸುರೇಶ್ ಇದ್ದರು

## ಕಸಾಪದಲ್ಲಿ ಮಹಿಳಾ ಪ್ರಾತಿನಿಧ್ಯ ದೊರೆಯಲಿ



ಕಲಬುರಗಿ: ಎಲ್ಲ ಕ್ಷೇತ್ರಗಳಲ್ಲೂ ಮಹಿಳೆಯರು ಮುಂದೆ ಇದ್ದು, ಧೈರ್ಯದಿಂದ ಮುನ್ನುಗ್ಗಿದಾಗ ಮಾತ್ರ ಶಕ್ತಿ ಬರುತ್ತದೆ. ಕನ್ನಡ ಸಾಹಿತ್ಯ ಪರಿಷಟನಲ್ಲಿ ಮಹಿಳೆಯರಿಗೆ ಪ್ರಾತಿನಿಧ್ಯ ದೊರೆಯಬೇಕು ಎಂದು ಪ್ರೊ.ನೀಲಾಂಬಿಕಾ ಪೊಲೀಸ್ ಪಾಟೀಲ್ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ನಾಲ್ಕು ಚಕ್ರ ಚಾ–ರಿಟೇಬಲ್ ಟ್ರಸ್ಟನಿಂದ ಏರ್ಪಡಿಸಿದ್ದ ಶ್ರೇಷ್ಠ ಕನ್ನಡಿಗ ಪ್ರಶಸ್ತಿ, ಕವಿಗೋಷ್ಠಿ ಹಾಗೂ ಕಲಬುರಗಿ ಕಣ್ಮಣಿ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿ, ಸಾಹಿತ್ಯ ಕ್ಷೇತ್ರದಲ್ಲಿ ಮಹಿಳಾ ಸಾಹಿತ್ಯ ತನ್ನದೇ ಸ್ಥಾನ ಹೊಂದಿದ್ದು, ಕಸಾಪದಂತ ಸಂಸ್ಥೆಯಲ್ಲಿ ಅಧಿಕಾರ ದೊರಕಿದರೆ ಇನ್ನಷ್ಟು ಪ್ರಾಧಾನ್ಯತೆ ದೊರೆಯಲಿದೆ ಎಂದರು.

ಕದಳಿ ಸಿರಿ ಆಸ್ಪತ್ರೆ ವೈದ್ಯ ಡಾ.ಭಾಗ್ಯಶ್ರೀ ಪಾಟೀಲ್,ನಾಲ್ಕು ಚಕ್ರ ಟ್ರಸ್ಟ್ ಮುಖ್ಯಸ್ಥೆ ಮಾಲಾ ಕಣ್ಣಿ, ಲೇಖಕಿಡಾ.ಕಾವ್ಯಶ್ರೀಮಹಾಗಾಂವಕರ್,ಮಹಾನಗರ ಪಾಲಿಕೆ ಉಪ ಆಯುಕ್ತರಾದ ಪ್ರಮೀಳಾ ಎಕೆ ಅವರು ಮಾತನಾಡಿದರು.

ಪಾಳಾದ ಗುರುಮೂರ್ತಿ ಶಿವಾಚಾರ್ಯರು ಸಾನ್ನಿಧ್ಯ ವಹಿಸಿದ್ದರು.ವಿಜಯವಾಣಿ ಸ್ಥಾನಿಕ ಸಂಪಾದಕ ಬಾಬುರಾವ ಯಡ್ರಾಮಿ, ದಿಶಾ ಕಾಲೇಜಿನ ಅಧ್ಯಕ್ಷ ಶಿವಾನಂದ ಖಜೂರ್ಗಿ, ಪ್ರಮುಖರಾದ ರಮೇಶ ತಿಪನೂರ, ಉಮೇಶ ಶೆಟ್ಟಿ, ಶರಣು ಪಾಟೀಲ್ ಇತರರಿದ್ದರು. ಅಂಬುಜಾ ಎಂ.ಡಿ. ನಿರೂಪಣೆ ಮಾಡಿದರು.

## ತಮಿಳುನಾಡು ರಾಜಕೀಯ ಚದುರಂಗದಾಟದಲ್ಲಿ ಹೊಸ ತಂತ್ರ

**ಪ್ರಜಲಿತ**

■ ಉದಯರಶ್ಮಿ ದಿನಪತ್ರಿಕೆ





ತಮಿಳುನಾಡಿನ ರಾಜಕಾರಣದ ನಾಡಿಮಿಡಿತವನ್ನು ಅರಿತವರಿಗೆ ಒಂದು ವಿಷಯ ಸ್ಪಷ್ಟ. ಇಲ್ಲಿ ರಾಷ್ಟ್ರೀಯ ಪಕ್ಷಗಳಿಗಿಂತ ಪ್ರಾದೇಶಿಕ ಅಸ್ಮಿತೆಗೆ, ಪ್ರಾದೇಶಿಕ ಭಾವನೆಗಳಿಗೆ ಹೆಚ್ಚಿನ ಮನ್ನಣೆ. ದ್ರಾವಿಡ ಚಳವಳಿಯ ಬೇರುಗಳು ಇನ್ನೂ ಗಟ್ಟಿಯಾಗಿರುವ ಈ ನೆಲದಲ್ಲಿ, ಕಾಂಗ್ರೆಸ್ ಆಗಲಿ ಬಿಜೆಪಿ ಆಗಲಿ, 'ದೆಹಲಿ ಪಕ್ಷ' ಎಂಬ ಹಣೆಪಟ್ಟಿಯಿಂದ ಹೊರಬರುವುದು ಸುಲಭವಲ್ಲ. ಈ ಕಹಿ ಸತ್ಯ ಬಿಜೆಪಿ ಹೈಕಮಾಂಡ್‌ಗೂ ಚೆನ್ನಾಗಿ ಗೊತ್ತಿದೆ. ಅಣ್ಣಾಮಲೈ ಅವರಿಗೂ ಗೊತ್ತಿದೆ.

ಈ ಹಿನ್ನೆಲೆಯಲ್ಲಿ ಕೆ. ಅಣ್ಣಾಮಲೈ ಅವರ ರಾಜೀನಾಮೆಯನ್ನು ಕೇವಲ 'ವೈಯಕ್ತಿಕ ನಿರ್ಧಾರ' ಎಂದು ನೋಡಿದರೆ ಅದು ರಾಜಕೀಯ ಅಜ್ಞಾನವಾಗುತ್ತದೆ. ಇದು ದೂರದೃಷ್ಟಿಯ, ಲೆಕ್ಕಾಚಾರದ ನಡೆ. ಬಿಜೆಪಿಗೆ ತಮಿಳುನಾಡಿನಲ್ಲಿ ನೇರವಾಗಿ ಅಧಿಕಾರದ ಗದ್ದುಗೆ ಏರುವುದು ಸದ್ಯಕ್ಕೆ ಕನಸಿನ ಮಾತು ಎಂಬುದನ್ನು ಅರಿತ ನಾಯಕತ್ವ, ಪರೋಕ್ಷ ಮಾರ್ಗವನ್ನು ಆಯ್ಕೆ ಮಾಡಿಕೊಂಡಿದೆ ಎಂಬುದು ಸ್ಪಷ್ಟ.

**ಪ್ರಾದೇಶಿಕ ಮುಖವಾಡ, ರಾಷ್ಟ್ರೀಯ ಲಾಭ**

ಪ್ರಧಾನಿ ನರೇಂದ್ರ ಮೋದಿ ಮತ್ತು ಅಮಿತ್ ಶಾ ಅವರ ಪರೋಕ್ಷ ಆಶೀರ್ವಾದ ಇಲ್ಲದೆ ಅಣ್ಣಾಮಲೈ ಅವರಂಥ ಪ್ರಬಲ ನಾಯಕ ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿ, ಹೊಸ ಪ್ರಾದೇಶಿಕ ಪಕ್ಷ ಕಟ್ಟಲು ಮುಂದಾಗಲು ಸಾಧ್ಯವೇ? ತಮಿಳು ಮಣ್ಣಿನ ಮಗ, ತಮಿಳು ಅಸ್ಮಿತೆಯ ಮಾತನಾಡುವ, ಭ್ರಷ್ಟಾಚಾರದ ವಿರುದ್ಧ ಗುಡುಗುವ ಅಣ್ಣಾಮಲೈ ಅವ–ರಿಗೆ ಇರುವ 'ಕ್ಲೀನ್ ಇಮೇಜ್' ಮತ್ತು ಯುವಕರಲ್ಲಿರುವ ಕ್ರೇಜ್ ಅನ್ನು ಬಿಜೆಪಿ ವ್ಯರ್ಥ ಮಾಡಿಕೊಳ್ಳುವುದಿಲ್ಲ.

**ತಂತ್ರ ಸರಳವಾಗಿದೆ**

ತಮಿಳುನಾಡಿನಲ್ಲಿ ಬಿಜೆಪಿ 'ಕಮಲ' ಚಿಹ್ನೆಯೊಂದಿಗೆ ನೇರವಾಗಿ ಗೆಲ್ಲಲು ಸಾಧ್ಯವಿಲ್ಲ. ಆದರೆ ತಮಿಳು ಹೆಸ–ರಿನ, ತಮಿಳು ನಾಯಕತ್ವದ, ಪ್ರಾದೇಶಿಕ ಸೊಗಡಿನ ಪಕ್ಷವೊಂದು ಗೆದ್ದರೆ? ಆ ಪಕ್ಷದ ಡಿಎನ್‌ಎಯಲ್ಲಿ ಬಿಜೆಪಿಯ ಸಿದ್ಧಾಂತ ಇದ್ದರೆ? ಆಗ ಅದು ಕೇಂದ್ರದೊಂದಿಗೆ ಸಹಜ ಮೈತ್ರಿ ಮಾಡಿಕೊಳ್ಳುತ್ತದೆ. ನೀತಿ, ನಿರ್ಧಾರಗಳಲ್ಲಿ ಬಿಜೆಪಿಯ ನಿಲುವಿಗೆ ಬೆಂಬಲ ಸಿಗುತ್ತದೆ. ರಾಜ್ಯಸಭೆಯಲ್ಲಿ ಸಂಖ್ಯಾಬಲ, ರಾಷ್ಟ್ರಪತಿ ಚುನಾವಣೆಯಲ್ಲಿ ಮತ, ಕೇಂದ್ರದ ಯೋಜನೆಗಳ ಅನುಷ್ಠಾನ – ಎಲ್ಲದರಲ್ಲೂ ಪರೋಕ್ಷ ಲಾಭ ಬಿಜೆಪಿಗೆ.

ಡಿಎಂಕೆ ಮತ್ತು ಎಐಎಡಿಎಂಕೆ ನಂತರದ ರಾಜಕೀಯ ನಿರ್ವಾತವನ್ನು ತುಂಬಲು ಅಣ್ಣಾಮಲೈ ಅವರನ್ನು ಬಿಜೆಪಿ 'ಪ್ಲಾನ್ ಬಿ' ಆಗಿ ಸಿದ್ಧಪಡಿಸುತ್ತಿದೆ. ಬಿಜೆಪಿ ಅಧಿಕೃತವಾಗಿ ವಿರೋಧ ಪಕ್ಷವಾಗಿ ಉಳಿದರೂ, ಅಧಿಕಾರದ ಚುಕ್ಕಾಣಿ ತಮ್ಮ ವಿಚಾರಧಾರೆಗೆ ಹೊಂದಿಕೆಯಾಗುವ ಕೈಯಲ್ಲಿರುತ್ತದೆ. ಇದಕ್ಕಿಂತ ಲಾಭದಾಯಕ ಒಪ್ಪಂದ ಮತ್ತೊಂದಿಲ್ಲ.

**ತಮಿಳು ಜನತೆಯ ಮುಂದಿರುವ ಆಯ್ಕೆ**

ಈಗ ಚೆಂಡು ತಮಿಳುನಾಡಿನ ಜನತೆಯ ಅಂಕಣದಲ್ಲಿದೆ. ದಶಕಗಳಿಂದ ಡಿಎಂಕೆ–ಎಐಎಡಿಎಂಕೆ ಆಡಳಿತವನ್ನು ನೋಡಿರುವ ಜನರಿಗೆ ಭ್ರಷ್ಟಾಚಾರ ಹೊಸದಲ್ಲ. 'ಭ್ರಷ್ಟಾಚಾರವಿಲ್ಲದ ಪಕ್ಷವೇ ಇಲ್ಲ' ಎಂಬುದು ಕಟು ಸತ್ಯ. ಹೀಗಿರುವಾಗ ಮತದಾರರು ಮಾಡಬೇಕಾಗಿರುವುದು 'ತುಲನಾತ್ಮಕ ಆಯ್ಕೆ' – ಯಾರು ಕಡಿಮೆ ಭ್ರಷ್ಟರು, ಯಾರ ಆಡಳಿತದಲ್ಲಿ ಅಭಿವೃದ್ಧಿಗೆ ಹೆಚ್ಚು ಅವಕಾಶ, ಯಾರು ತಮಿಳು ಹಿತವನ್ನು ಕಾಪಾಡಿಕೊಂಡು ರಾಷ್ಟ್ರೀಯ ಮುಖ್ಯವಾಹಿನಿಯೊಂದಿಗೆ ಬೆರೆಯಬಲ್ಲರು ಎಂಬುದನ್ನು ನಿರ್ಧ–ರಿಸಬೇಕು.

ಅಣ್ಣಾಮಲೈ ಅವರ ಹೊಸ ಪಕ್ಷ ಒಂದು ವೇಳೆ ಆ ನಂಬಿಕೆಯನ್ನು ಗಳಿಸಿದರೆ, ಅದು ತಮಿಳುನಾಡಿನ ರಾಜ–ಕಾರಣದಲ್ಲಿ ಮೂರನೇ ದೊಡ್ಡ ಶಕ್ತಿಯಾಗಿ ಹೊರಹೊಮ್ಮಬಹುದು. ಆ ಶಕ್ತಿಯ ನೆರಳು ಪರೋಕ್ಷವಾಗಿ ಬಿಜೆಪಿಯ ಮೇಲೆ ಬೀಳುವುದರಲ್ಲಿ ಅನುಮಾನವಿಲ್ಲ.

ಈರಾಜಕೀಯಚದುರಂಗದಾಟದಲ್ಲಿ ಬಿಜೆಪಿ ಹೈಕಮಾಂಡ್ ಹೂಡಿರುವ ದಾಳ ಸರಿಯಾಗಿದೆಯೇ, ಅಣ್ಣಾಮಲೈ ಅವರು ತಮಿಳು ಜನಮಾನಸವನ್ನು ಗೆಲ್ಲುತ್ತಾರೆಯೇ ಎಂಬುದನ್ನು ಕಾಲವೇ ನಿರ್ಧರಿಸಬೇಕು. ಸದ್ಯಕ್ಕಂತೂ ಈ ಲೆಕ್ಕಾಚಾರ ಬಿಜೆಪಿ ಮತ್ತು ಅಣ್ಣಾಮಲೈ ಬಣ ಎರಡಕ್ಕೂ ಅನುಕೂಲಕರವಾಗಿ ಕಾಣುತ್ತಿದೆ.

ಆಶಿಸೋಣ, ಈ ಹೊಸ ಪ್ರಯೋಗದಿಂದ ತಮಿಳುನಾಡಿಗೆ ಕಡಿಮೆ ಭ್ರಷ್ಟಾಚಾರ, ಹೆಚ್ಚು ಅಭಿವೃದ್ಧಿ ಸಿಗಲಿ. ರಾಜಕೀಯ ತಂತ್ರಗಳಾಚೆ ಜನರ ಹಿತವೇ ಮುಖ್ಯವಾಗಲಿ.



ಲೇಖನ
ಮ.ನಾ.ಉಡುಪ
ಮಂಡ್ಯ

## ಮಳೆಗಾಲಕ್ಕೆ ಜೆಸ್ಕಾಂ ಜೀರೋ ಟಾಲರೆನ್ಸ್ ನೀತಿ: ಪ್ರವೀಣ್ ಪಾಟೀಲ್ ಹರವಾಳ

ಕಲಬುರಗಿ : ಮಳೆಗಾಲ ಆರಂಭವಾಗುತ್ತಿರುವ ಹಿನ್ನೆಲೆಯಲ್ಲಿ ವಿದ್ಯುತ್ ಸಂಬಂಧಿತ ಅವಘಡಗಳ ಸಂಭವ ಹೆಚ್ಚಾಗುವ ಸಾಧ್ಯತೆ ಇರುವುದರಿಂದ ಜೆಸ್ಕಾಂ ವ್ಯಾಪ್ತಿಯ ಎಲ್ಲಾ ಇಂಜಿನಿಯರಗಳು ಹಾಗೂ ಅಧಿಕಾರಿಗಳು ಅತ್ಯಂತ ಎಚ್ಚ–ರಿಕೆಯಿಂದ ಕಾರ್ಯನಿರ್ವಹಿಸುವಂತೆ ಜೆಸ್ಕಾಂ ಅಧ್ಯಕ್ಷರಾದ ಪ್ರವೀಣ್ ಪಾಟೀಲ್ ಹರವಾಳ ಸೂಚಿಸಿದ್ದಾರೆ.

ಮಳೆ ಮತ್ತು ಗಾಳಿಯಿಂದ ವಿದ್ಯುತ್ ತಂತಿಗಳು ಹರಿದು ಬೀಳುವುದು, ವಿದ್ಯುತ್ ಕಂಬಗಳು ಹಾನಿಗೊಳಗಾಗುವುದು ಹಾಗೂ ವಿದ್ಯುತ್ ವ್ಯತ್ಯಯ ಉಂಟಾಗುವ ಸಂಭವ ಹೆಚ್ಚಿದ್ದು, ಇಂತಹ ಸಂದರ್ಭಗಳಲ್ಲಿ ಸಾರ್ವಜನಿಕರ ಜೀವ ಮತ್ತು ಆಸ್ತಿಗೆ ಅಪಾಯ ಎದುರಾಗುವ ಸಾಧ್ಯತೆ ಇದೆ ಎಂದು ಅವರು ತಿಳಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ವಿದ್ಯುತ್ ಲೈನಗಳ ನಿರಂತರ ಪರಿಶೀಲನೆ, ದುರ್ಬಲ ತಂತಿಗಳು ಹಾಗೂ ಕಂಬಗಳ ತಕ್ಷಣದ ದುರಸ್ತಿ ಮತ್ತು ತುರ್ತು ಪರಿಸ್ಥಿತಿಗಳಿಗೆ ಅಗತ್ಯ ಸಿದ್ಧತೆಗಳನ್ನು ಕಡ್ಡಾಯವಾಗಿ ಕೈಗೊಳ್ಳುವಂತೆ ಅಧಿಕಾ–ರಿಗಳಿಗೆ ಸೂಚನೆ ನೀಡಲಾಗಿದೆ. ಯಾವುದೇ ನಿರ್ಲಕ್ಷ್ಯ ಅಥವಾ ವಿಳಂಬ ಕಂಡುಬಂದಲ್ಲಿ ಸಂಬಂಧಿತ ಅಧಿಕಾರಿಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದ್ದಾರೆ. ವಿದ್ಯುತ್ ವ್ಯವಸ್ಥೆಯ ಸಮರ್ಪಕ ನಿರ್ವಹಣೆ ಹಾಗೂ ತುರ್ತು ಪರಿಸ್ಥಿತಿಗಳಿಗೆ ತಕ್ಷಣ ಸ್ಪಂದಿಸುವ ಉದ್ದೇಶದಿಂದ ವಿದ್ಯುತ್ ಕಂಬಗಳು, ಟ್ರಾನ್ಸಫಾರ್ಮಗಳು ಮತ್ತು ವಿದ್ಯುತ್ ತಂತಿಗಳ ಸಮರ್ಪಕಸ್ಟಾಕ್‌ಅನ್ನುಕಡ್ಡಾಯವಾಗಿಸಂಗ್ರಹಿಸಿಟ್ಟುಕೊಳ್ಳುವಂತೆ ಸಂಬಂಧಿತ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

# ಮುಂಗಾರು ಹಂಗಾಮಿಗೆ ರೈತರ ಭರದ ಸಿದ್ಧತೆ

■ ಉದಯರಶ್ಮಿ ದಿನಪತ್ರಿಕೆ

■ ವರದಿ: ಬಸವರಾಜ ನಂದಿಹಾಳ



ಬಸವನಬಾಗೇವಾಡಿ: ಮುಂಗಾರು ಹಂಗಾಮಿನ ಆರಂಭವಾಗುತ್ತಿದ್ದಂತೆ ರೈತ ಬಾಂಧವರು ಬಿತ್ತನೆ ಕಡೆಗೆ ಮುಖ ಮಾಡುತ್ತಿದ್ದಾರೆ. ರೈತ ಬಾಂಧವರು ಬಿತ್ತನೆಗೆ ಬೇಕಾದ ಬೀಜಗಳನ್ನು ಖರೀದಿಸುವುದರಲ್ಲಿ ತಲ್ಲೀನರಾಗಿದ್ದಾರೆ. ತಾಲೂಕಿನಲ್ಲಿ ಕಳೆದ ವಾರದಲ್ಲಿ 10.3 ಎಂ.ಎಂ. ಮಳೆಯಾಗಬೇಕಿತ್ತು. 3.8 ಎಂ.ಎಂ ಮಳೆ ಮಾತ್ರ ಆಗಿದೆ. ನಿರೀಕ್ಷೆಯಷ್ಟು ಮಳೆಯಾಗಿಲ್ಲ. ಮಳೆಯ ನಿರೀಕ್ಷೆಯಲ್ಲಿ ರೈತ ಬಾಂಧವರು ಬಿತ್ತನೆಗೆ ಅಗತ್ಯ ಸಿದ್ಧತೆ ಮಾಡಿಕೊಳ್ಳುತ್ತಿದ್ದಾರೆ. ಬುಧವಾರ ಮಧ್ಯಾಹ್ನ ವೇಳೆ ಪಟ್ಟಣ ಸೇರಿದಂತೆ ಕೆಲವೆಡೆ ದಟ್ಟವಾದ ಮೋಡ ಕವಿದ ವಾತಾವರಣದೊಂದಿಗೆ ಆರಂಭವಾದ ಮಳೆ ಕೆಲ ಹೊತ್ತು ಬಂದಿತ್ತು. ಬಿರು ಬಿಸಿಲಿನ ಧಗೆಯಿಂದ ತತ್ತರಿಸಿದ ಜನತೆಗೆ ಕೊಂಚ ತಂಪು ತಂದಿತ್ತು.

ಪಟ್ಟಣದ ರೈತ ಸಂಪರ್ಕ ಕೇಂದ್ರದಲ್ಲಿ ರೈತರು ಬೀಜ ಪಡೆಯಲು ಸರದಿಯಲ್ಲಿ ನಿಂತು ಮೊದಲು ಟೋಕನ್ ಪಡೆದುಕೊಂಡ ನಂತರ ತಮ್ಮ ಆಧಾರ ಕಾರ್ಡ್ ನೀಡಿ ತಮಗೆ ಅಗತ್ಯವಿರುವ ಬೀಜಗಳಿಗೆ ರಸೀದಿ ಮಾಡಿಸಿಕೊಂಡು ಹಣ ಪಾವತಿ ಮಾಡಿದ ನಂತರ ಬೀಜ ವಿತರಣೆ ಕಾರ್ಯ ಮಾಡುತ್ತಿರುವದು ಕಂಡುಬಂದಿತ್ತು.

ಬಸವನಬಾಗೇವಾಡಿ ತಾಲೂಕಿನಲ್ಲಿ ಮುಸಕಿನ ಜೋಳ ನೀರಾವರಿ ಮತ್ತು ಖುಷ್ಕಿ ಜಮೀನು ಸೇ-ರಿದಂತೆ 11,156 ಹೆಕ್ಟೇರ್ ಪ್ರದೇಶದಲ್ಲಿ, ಸಜ್ಜೆ ನೀರಾವರಿ ಮತ್ತು ಖುಷ್ಕಿ ಜಮೀನು ಸೇರಿದಂತೆ 642 ಹೆಕ್ಟೇರ್ ಪ್ರದೇಶ,ತೊಗರಿ ನೀರಾವರಿ ಮತ್ತು ಖುಷ್ಕಿ ಜಮೀನು ಸೇರಿದಂತೆ56,478 ಹೆಕ್ಟೇರ್ ಪ್ರದೇಶ, ಹೆಸರು ನೀರಾವರಿ ಮತ್ತು ಖುಷ್ಕಿ ಜಮೀನು ಸೇರಿದಂತೆ 14 ಹೆಕ್ಟೇರ್ ಪ್ರದೇಶ, ಉದ್ದು ನೀರಾವರಿ ಮತ್ತು ಖುಷ್ಕಿ ಜಮೀನು ಸೇರಿದಂತೆ 12 ಹೆಕ್ಟೇರ್ ಪ್ರದೇಶ, ಅಲಸಂದಿ ಇತರೆ ನೀರಾವರಿ ಮತ್ತು ಖುಷ್ಕಿ ಜಮೀನು ಸೇರಿದಂತೆ 2 ಹೆಕ್ಟೇರ್ ಪ್ರದೇಶ, ಶೇಂಗಾ ನೀರಾವರಿ ಮತ್ತು ಖುಷ್ಕಿ ಜಮೀನು ಸೇರಿದಂತೆ 223 ಹೆಕ್ಟೇರ್ ಪ್ರದೇಶ, ಸೂರ್ಯಕಾಂತಿ ನೀರಾವರಿ ಮತ್ತು ಖುಷ್ಕಿ ಜಮೀನು ಸೇರಿದಂತೆ 2,128 ಹೆಕ್ಟೇರ್ ಪ್ರದೇಶ, ಹತ್ತಿ ನೀರಾವರಿ ಮತ್ತು ಖುಷ್ಕಿ ಜಮೀನು ಸೇ-ರಿದಂತೆ 3,056 ಹೆಕ್ಟೇರ್ ಪ್ರದೇಶ, ನೀರಾವರಿ ಪ್ರದೇಶದಲ್ಲಿ ನಾಟಿ ಕಬ್ಬು 580 ಹೆಕ್ಟೇರ್ ಪ್ರದೇಶ, ಕೂಳೆ ಕಬ್ಬು 1,848 ಹೆಕ್ಟೇರ್ ಪ್ರದೇಶದಲ್ಲಿ ಕೃಷಿ ಇಲಾಖೆಯು ಮುಂಗಾರು ಹಂಗಾಮಿನಲ್ಲಿ ಬಿತ್ತನೆ ಗುರಿ ಇಟ್ಟುಕೊಂಡಿದೆ.

ಕೊಲ್ಹಾರ ಭಾಗದಲ್ಲಿ ಗೋವಿನಜೋಳ ಬೀಜ, ಹೂವಿನಹಿಪ್ಪರಗಿ, ಬಸವನಬಾಗೇವಾಡಿ, ಮನಗೂಳಿ ಭಾಗದಲ್ಲಿ ತೊಗರಿ ಬೀಜ, ನಿಡಗುಂದಿ ಭಾಗದಲ್ಲಿ ತೊಗರಿ, ಗೋವಿನಜೋಳ ಬೀಜ ಹೆಚ್ಚು ಮಾರಾಟವಾಗುತ್ತಿದೆ. ಅಖಂಡ ತಾಲೂಕಿನಲ್ಲಿ ಬಹುತೇಕ ರೈತರು ತೊಗರಿ ಬಿತ್ತನೆ ಮಾಡಲು ಮುಂದಾಗಿರುವುದ-ರಿಂದಾಗಿ ತೊಗರಿ ಬೀಜಕ್ಕೆ ಬಹು ಬೇಡಿಕೆ ಕಂಡು ಬರುತ್ತಿದೆ. ಒಣಬೇಸಾಯಕ್ಕೆ ಟಿಎಸ್‌ತ್ರಿಆರ್ ತೊಗರಿ ಬೀಜ ರೈತರು ಖರೀದಿ ಮಾಡುತ್ತಿದ್ದಾರೆ. ಎಲ್ಲ ರೈತ ಸಂಪರ್ಕ ಕೇಂದ್ರದಲ್ಲಿ ತೊಗರಿ ಬೀಜ ಸದ್ಯ ದಾಸ್ತಾನು ಇದೆ. ಬೀಜಕ್ಕೆ ತೊಂದರೆಯಾಗಿಲ್ಲ. ಅಗತ್ಯವಿರುವ ಗೊಬ್ಬರ ಗೊಬ್ಬರ ಮಳಿಗೆಗಳಲ್ಲಿ ದಾಸ್ತಾನು ಇದೆ ಎಂದು ಕೃಷಿ ಅಧಿಕಾರಿಗಳು ಹೇಳುತ್ತಾರೆ.

ಬಸವನಬಾಗೇವಾಡಿ ರೈತ ಸಂಪರ್ಕ ಕೇಂದ್ರ ವ್ಯಾಪ್ತಿಯಲ್ಲಿ 148.6 ಕ್ವಿಂಟಾಲ್ ಗೋವಿನ ಜೋಳ ಬಂದಿದೆ. ಇದರಲ್ಲಿ 53.04 ಕ್ವಿಂಟಾಲ್ ವಿತರಣೆಯಾಗಿದೆ. 82.45 ಕ್ವಿಂಟಾಲ್ ತೊಗರಿ ಬಂದಿದ್ದು, ಇದರಲ್ಲಿ 9.35 ಕ್ವಿಂಟಾಲ್ ತೊಗರಿ ಬೀಜ ವಿತರಣೆಯಾಗಿದೆ. 1.2 ಕ್ವಿಂಟಾಲ್ ಹೆಸರು ಬೀಜ ಬಂದಿದೆ. 90 ಕೆಜಿ ಕ್ವಿಂಟಾಲ್ ಸಜ್ಜೆ ಬಂದಿದೆ. ಇದರಲ್ಲಿ 31.5 ಕೆಜಿ ಕ್ವಿಂಟಾಲ್ ವಿತರಣೆಯಾಗಿದೆ. 1.5 ಕ್ವಿಂಟಾಲ್ ಸೂರ್ಯಕಾಂತಿ ಬಂದಿದೆ. ಇದರಲ್ಲಿ 8 ಕೆಜಿ ಕ್ವಿಂಟಾಲ್ ವಿತರಣೆಯಾಗಿದೆ. ಹೂವಿನಹಿಪ್ಪರಗಿ ರೈತ ಸಂಪರ್ಕ ಕೇಂದ್ರ ವ್ಯಾಪ್ತಿಯಲ್ಲಿ 97.2 ಕ್ವಿಂಟಾಲ್ ಗೋವಿನ ಜೋಳ ಬಂದಿದೆ. ಇದಲ್ಲಿ 6 ಕ್ವಿಂಟಾಲ್ ವಿತರಣೆಯಾಗಿದೆ. 59 ಕ್ವಿಂಟಾಲ್ ತೊಗರಿ ಬೀಜ ಬಂದಿದೆ. ಇದರಲ್ಲಿ 9.9 ಕ್ವಿಂಟಾಲ್ ವಿತರಣೆಯಾಗಿದೆ.

60 ಕೆಜಿ ಹೆಸರು ಬೀಜ ಬಂದಿದೆ. ಇದರಲ್ಲಿ 5 ಕೆಜಿ ವಿತರಣೆಯಾಗಿದೆ. 2.58 ಕ್ವಿಂಟಾಲ್ ಸಜ್ಜೆ ಬೀಜ ಬಂದಿದೆ. ಇದರಲ್ಲಿ 11 ಕೆಜಿ ವಿತರಣೆಯಾಗಿದೆ. 1.5 ಕ್ವಿಂಟಾಲ್ ಸೂರ್ಯಕಾಂತಿ ಬಂದಿದೆ. ಇದರಲ್ಲಿ 4.5 ಕೆಜಿ ಕ್ವಿಂಟಾಲ್ ವಿತರಣೆಯಾಗಿದೆ. ಕೊಲ್ಹಾರ ರೈತ ಸಂಪರ್ಕ ಕೇಂದ್ರದ ವ್ಯಾಪ್ತಿಯಲ್ಲಿ 165.44 ಕ್ವಿಂಟಾಲ್ ಗೋವಿನಜೋಳ ಬೀಜ ಬಂದಿದೆ. ಇದರಲ್ಲಿ 48.72 ಕ್ವಿಂಟಾಲ್ ವಿತರಣೆಯಾಗಿದೆ. 19 ಕ್ವಿಂಟಾಲ್ ತೊಗರಿ ಬೀಜ ಬಂದಿದೆ. ಇದರಲ್ಲಿ 1.15 ಕ್ವಿಂಟಾಲ್ ವಿತರಣೆಯಾಗಿದೆ. 60 ಕೆಜಿ ಹೆಸರು ಬೀಜ ಬಂದಿದೆ. ಹೆಸರು ವಿತರಣೆಯಾಗಿಲ್ಲ. 1.5 ಕ್ವಿಂಟಾಲ್ ಸೂರ್ಯಕಾಂತಿ ಬಂದಿದೆ. ಇದರಲ್ಲಿ ವಿತರಣೆಯಾಗಿಲ್ಲ. ಮನಗೂಳಿ ರೈತ ಸಂಪರ್ಕ ಕೇಂದ್ರ ವ್ಯಾಪ್ತಿಯಲ್ಲಿ 84.2 ಕ್ವಿಂಟಾಲ್ ಗೋವಿನಜೋಳ ಬೀಜ ಬಂದಿದೆ. ಇದರಲ್ಲಿ 13.32 ಕ್ವಿಂಟಾಲ್ ವಿತರಣೆಯಾಗಿದೆ. 131.3 ಕ್ವಿಂಟಾಲ್ ತೊಗರಿ ಬೀಜ ಬಂದಿದೆ. ಇದರಲ್ಲಿ 6.3 ಕ್ವಿಂಟಾಲ್ ವಿತರಣೆಯಾಗಿದೆ. 60 ಕೆಜಿ ಹೆಸರು ಬೀಜ ಬಂದಿದೆ. ಇದರಲ್ಲಿ 5 ಕೆಜಿ ವಿತರಣೆಯಾಗಿದೆ.1.5 ಕ್ವಿಂಟಾಲ್ ಸೂರ್ಯಕಾಂತಿ ಬಂದಿದೆ.

ಇದರಲ್ಲಿ 8 ಕೆಜಿ ವಿತರಣೆಯಾಗಿದೆ. ನಿಡಗುಂದಿ ರೈತ ಸಂಪರ್ಕ ಕೇಂದ್ರದ ವ್ಯಾಪ್ತಿಯಲ್ಲಿ 152.2 ಕ್ವಿಂಟಾಲ್ ಗೋವಿನ ಜೋಳ ಬೀಜ ಬಂದಿದೆ. ಇದರಲ್ಲಿ 44.2 ಕ್ವಿಂಟಾಲ್ ವಿತರಣೆಯಾಗಿದೆ. 28.25 ಕ್ವಿಂಟಾಲ್ ತೊಗರಿ ಬಂದಿದೆ. ಇದರಲ್ಲಿ 10.45 ಕ್ವಿಂಟಾಲ್ ವಿತರಣೆಯಾಗಿದೆ. 60 ಕ್ವಿಂಟಾಲ್ ಹೆಸರು ಬೀಜ ಬಂದಿದೆ. ಇದರಲ್ಲಿ ಎಷ್ಟು ವಿತರಣೆಯಾಗಿಲ್ಲ. 3 ಕ್ವಿಂಟಾಲ್ ಸೂರ್ಯಕಾಂತಿ ಬಂದಿದೆ. ಇದರಲ್ಲಿ 46 ಕೆಜಿ ಕ್ವಿಂಟಾಲ್ ವಿತರಣೆಯಾಗಿದೆ ಎಂದು ಕೃಷಿ ಇಲಾಖೆ ತಾಂತ್ರಿಕ ಅಧಿಕಾರಿ ಗಾಯತ್ರಿ ಶಿಂಧೆ ತಿಳಿಸಿದರು.

ಪಟ್ಟಣದ ರೈತ ಸಂಪರ್ಕ ಕೇಂದ್ರದಲ್ಲಿ ಬುಧವಾರ ಕೃಷಿ ಅಧಿಕಾರಿ ಚಿದಾನಂದ ಹಿರೇಮಠ ಅವರು ಬೀಜ ವಿತರಿಸಿದ ಸಂದರ್ಭದಲ್ಲಿ ರೈತರು ಬಿತ್ತನೆ ಮಾಡುವ ಸಂದರ್ಭದಲ್ಲಿ ಬೀಜೋಪಚಾರ ಮಾಡಬೇಕು. ತೊಗರಿ ಬೆಳೆಯಲ್ಲಿ ಸೂರ್ಯಕಾಂತಿ, ಸಜ್ಜೆ, ಮೆಕ್ಕೆಜೋಳ, ಹೆಸರು,ಶೇಂಗಾ ಹಾಗೂ ಉದ್ದು ಬೆಳೆಗಳನ್ನು ಅಂತರ ಬೆಳೆಯನ್ನಾಗಿ ಬೆಳೆಯಬೇಕು. ಹತ್ತಿಯ ಬೆಳೆಯಲ್ಲಿ ತೊಗರಿ ಬೆಳೆಯನ್ನು ಕಾವಲು ಬೆಳೆಯನ್ನಾಗಿ ಬೆಳೆಯಬೇಕು. ನ್ಯಾನೋ ಯೂರಿಯಾ, ನ್ಯಾನೋ ಡಿ.ಎ.ಪಿ. ಪಲ್ಸ ಮ್ಯಾಜಿಕ್ ಹಾಗೂ ಪಲ್ಸ ಬೂಸ್ಟರ್ ಇತ್ಯಾದಿಗಳನ್ನು ಬಳಕೆ ಮಾಡಬೇಕು. ಇದರಿಂದ ಹೆಚ್ಚಿನ ಇಳುವರಿ ಪಡೆಯಬಹುದಾಗಿದೆ ಎಂದು ರೈತರಿಗೆ ಸಲಹೆ ನೀಡಿದರು.

ಬಸವನಬಾಗೇವಾಡಿ ರೈತ ಸಂಪರ್ಕ ಕೇಂದ್ರದಲ್ಲಿ ಬೀಜ ಖರೀದಿಸಲು ಆಗಮಿಸಿದ್ದ ನಾಗೂರಿನ ಶಾಂತಯ್ಯ ಶೀಕಳವಾಡಿಮಠ ಅವರನ್ನು ಮಾತನಾಡಿಸಿದಾಗ, ಕೆಲ ದಿನಗಳ ಹಿಂದೆ ಮಳೆಯಾಗಿದೆ. ಮುಂಗಾರು ಹಂಗಾಮಿನಲ್ಲಿ ಮಳೆಯಾಗುವ ಲಕ್ಷಣ ಗೋಚ-ರಿಸಿದ ಹಿನ್ನೆಲೆಯಲ್ಲಿ ಮುಂದಿನ ದಿನಗಳಲ್ಲಿ ಬೀಜ ಖಾಲಿಯಾದರೆ ತೊಂದರೆಯಾಗುತ್ತದೆ. ಅದಕ್ಕಾಗಿ ಈಗಲೇ ಬೀಜ ಖರೀದಿಸಿ ತೆಗೆದುಕೊಂಡು ಹೋಗುತ್ತಿದ್ದೇನೆ. ಬಿತ್ತನೆ ಅಗತ್ಯವಿರುವ ಮಳೆಯಾದ ನಂತರ ಬಿತ್ತನೆ ಕಾರ್ಯ ಮಾಡಲಾಗುವುದು. ಈ ಸಲ ಬೀಜದ ದರ ಹೆಚ್ಚಳವಾಗಿದೆ ಎಂದರು.

ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಎ.ಪಿ. ಬಿರಾದಾರ ಅವರನ್ನು ಸಂಪರ್ಕಿಸಿದಾಗ, ಕೃಷಿ ಇಲಾಖೆಯಿಂದ ಬಿತ್ತನೆ ಬೀಜ ವಿತರಣೆ ಮಾಡಲಾಗುತ್ತಿದೆ. ಎಲ್ಲ ರೈತ ಸಂಪರ್ಕ ಕೇಂದ್ರದಲ್ಲಿ ಎಲ್ಲ ಬೀಜಗಳು ದಾಸ್ತಾನು ಇದೆ. ಬೀಜ ವಿತರಣೆಯಲ್ಲಿ ತೊಂದರೆಯಾಗದಂತೆ ನೋಡಿಕೊಳ್ಳಲಾಗುವುದು. ಅಖಂಡ ತಾಲೂಕಿನಲ್ಲಿ ಭೂಮಿ ತಯಾರಿಕೆಗೆ ಮಳೆಯಾಗಿದೆ.ಬಿತ್ತನೆಗೆ ಇನ್ನಷ್ಟು ಮಳೆ ಆಗುವ ಅಗತ್ಯವಿದೆ. ರೈತರು ಕಳಪೆ ಬೀಜಗಳನ್ನು ಖರೀದಿಸದೇ ಉತ್ತಮ ಗುಣಮಟ್ಟದ ಬೀಜಗಳನ್ನು ಖರೀದಿಸಿ ಬಿತ್ತನೆ ಮಾಡಬೇಕು. ಅಖಂಡ ತಾಲೂಕಿನಲ್ಲಿರುವ ಐದು ಕೃಷಿ ಸಂಪರ್ಕ ಕೇಂದ್ರದಲ್ಲಿ ಮುಂಗಾರು ಹಂಗಾಮಿನ ಬಿತ್ತನೆ ಬೀಜ ವಿತರಣೆ ಮಾಡಲಾಗುತ್ತಿದೆ. ಬೀಜಗಳ ಪ್ಯಾಕೆಟ್ ಮೇಲೆ ಕ್ಯೂಆರ್ ಕೋಡ್ ಇರುವದರಿಂದ ಅದನ್ನು ಸ್ಕ್ಯಾನ್ ಮಾಡಬೇಕಾಗಿರುವದರಿಂದ ಬೀಜಗಳ ಪ್ಯಾಕೆಟ್‌ಗಳನ್ನು ಕೊಡುವಾಗ ರೈತರು ಸಹಕರಿಸಬೇಕೆಂದರು.

## ತಾಯಿ-ತಂದೆ ಋಣ ತೀರಿಸುವುದು ಅಸಾಧ್ಯ : ಪ್ರೊ. ಕಡ್ಡಿ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ದಾಸೋಹ ಮತ್ತು ಪರೋಪಕಾರ ಮಾಡುವುದರ ಮೂಲಕ ತಂದೆ ತಾಯಿ,ಗುರು ಹಿರಿಯರ ಋಣಭಾರದಿಂದ ಸ್ವಲ್ಪಮಟ್ಟಿನ ಮುಕ್ತಿ ಪಡೆಯಬಹುದು. ಶರಣರು ಕಲಿಸಿಕೊಟ್ಟ ದಾಸೋಹ ಸಂಸ್ಕೃತಿಯಿಂದ ಜ್ಞಾನಾಭಿವೃದ್ಧಿಯಾಗುವುದಲ್ಲದೆ ವರ್ಗಭೇದವಳಿದು ಶಾಂತಿ ನೆಮ್ಮದಿಗಳು ನೆಲೆಸುತ್ತವೆ.ಆಗ ಬದುಕು ಸುಂದರವಾಗುವುದೆಂದು ಪ್ರೊ.ಬಸವರಾಜ ಕಡ್ಡಿಯವರು ಹೇಳಿದರು.

ಅವರು ನಗರದ ವೀರಶೈವ ಲಿಂಗಾಯತ ಮಹಾಸಭಾ ಭವನದಲ್ಲಿ ಹಮ್ಮಿಕೊಂಡಿದ್ದ ಲಿಂ.ಪಾರ್ವತಿ ಗುರುಪಾದಪ್ಪ ಕೋರಿ ಅವರ ಸ್ಮರಣಾರ್ಥ ನಡೆದ ದತ್ತಿ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದರು.

ವಿ.ಸಿ.ನಾಗಠಾಣ ಅವರು ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು.

ಡಾ.ವಿ.ಡಿ.ಐಹೊಳ್ಳಿ ಸ್ವಾಗತಿಸಿದರು. ಜಂಬುನಾಥ ಕಂಚ್ಯಾಣಿಯವರು ಪ್ರಾಸ್ತಾವಿಕ ವಾಗಿ ಮಾತನಾಡಿದರು.

ವೇದಿಕೆಯ ಮೇಲಿದ್ದ ಈಶ್ವರಪ್ಪ ಕೋರಿ, ಕೋರಿ ಜಗದೀಶ ಮತ್ತು ಶರಣಪ್ಪ ಮಾತನಾಡಿದರು.

ಈರಣ್ಣ ತೊಂಡಿಕಟ್ಟಿ ಕಾರ್ಯಕ್ರಮ ನಿರೂಪಿಸಿದರು. ಮ.ಗು.ಯಾದವಾಡ ವಂದಿಸಿದರು.

ಕಾರ್ಯಕ್ರಮದಲ್ಲಿ ದೊಡ್ಡಣ್ಣ ಬಜಂತ್ರಿ, ಶಶಿಕಾಂತ ಸಾತಿಹಾಳ, ಸುಜಾತಾ ಪಾಟೀಲ, ಎಸ್.ಎಸ್.ಪಾಟೀಲ, ಪ್ರೊ.ಬಿ.ಜಗದೀಶ, ಎಸ್.ಬಿ. ದೊಡಮನಿ ದಂಪತಿಗಳು , ಎಸ್.ವಾಯ್.ಗದಗ, ನೂತನ ಬ್ಯಾಕೋಡ, ಮುಂತಾದವರು ಉಪಸ್ಥಿತ-ರಿದ್ದರು.

## ತಂಬಾಕು ಸೇವನೆ ಜೀವಕ್ಕೆ ಆಪತ್ತು : ಡಾ. ತರನ್ನುಮ್



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ತಂಬಾಕು ವಿರೋಧಿ ದಿನದ ಅಂಗವಾಗಿ ವಿಜಯಪುರದ ಬಿ ಎಲ್ ಡಿ ಇ ಸಂಸ್ಥೆಯ ಎಸ್ ಬಿ ಕಲಾ ಮತ್ತು ಕೆ.ಸಿ.ಪಿ ವಿಜ್ಞಾನ ಮಹಾವಿದ್ಯಾಲಯದಲ್ಲಿ ಎನ್ ಎಸ್ ಎಸ್ ಘಟಕ-ಋ ಮತ್ತು ಘಟಕ-ಋಋ ನೇತೃತ್ವದಲ್ಲಿ ತಂಬಾಕು ಸೇವನೆಯ ಹಾನಿಕಾರಕ ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಆರೋಗ್ಯಕರ ಮತ್ತು ತಂಬಾಕು ಮುಕ್ತ ಜೀವನಶೈಲಿಯನ್ನು ಪ್ರೋತ್ಸಾಹಿಸಲು ವಿಶೇಷ ಜಾಗೃತಿ ಕಾರ್ಯಕ್ರಮ ಜರುಗಿತು.

ಈ ಸಂದರ್ಭದಲ್ಲಿ ಪ್ರೊ.ಮಿಲನ್ ರಾಥ-ೋಡ್ ಹಾಗೂ ಡಾ.ತರನ್ನುಮ್ ಜಬೀನ್ ಖಾನ್ ಮಾತನಾಡಿ, ಧೂಮಪಾನ ಮತ್ತು ತಂಬಾಕು ಉತ್ಪನ್ನಗಳ ಬಳಕೆಯಿಂದ ಜೀವಕ್ಕೆ ಅಪಾಯವೇ ಹೆಚ್ಚು. ತಂಬಾಕಿನಲ್ಲಿ ಕ್ಯಾನ್ಸರ್ ಕಾರಕ ಅಂಶ ಇರುವುದರಿಂದ ನಾವೆಲ್ಲ ತಂಬಾಕು ಸೇವನೆ ಮಾಡಬಾರದು.

ಪ್ರತಿಯೊಬ್ಬರ ಉತ್ತಮ ಆರೋಗ್ಯ ಸ್ವಾಸ್ಥ್ಯ ಸಮಾಜದ ಹೆಗ್ಗುರುತು ಎಂದರು.

ತಂಬಾಕಿನ ಅಂಶ ಹೃದಯ ಸಂಬಂಧಿ ರೋಗಕ್ಕೂ ಕಾರಣವಾಗುತ್ತದೆ. ಆ ಹಿನ್ನೆಲೆ ವಿದ್ಯಾರ್ಥಿಗಳು ತಂಬಾಕಿನ ಅಪಾಯದ ಕು-ರಿತು ಸಾರ್ವಜನಿಕರಲ್ಲಿ ಜಾಗೃತಿ ಹಾಗೂ ಅರಿವು ಮೂಡಿಸಬೇಕು ಎಂದು ಹೇಳಿದರು

## ದಸಾಪ ಜಿಲ್ಲಾ ಘಟಕದ ಅಧ್ಯಕ್ಷರಾಗಿ ರವಿ ಕಿತ್ತೂರ ನೇಮಕ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಸಮಾಜಮುಖಿ ಹಾಗೂ ಸೃಜನಾತ್ಮಕ ಚಟುವಟಿಕೆಯಲ್ಲಿ ಸದಾ ತಮ್ಮನ್ನು ತಾವು ತೊಡಗಿಸಿಕೊಂಡು, ಸಾಮಾಜಿಕ ಹೋರಾಟ ಮತ್ತು ದಲಿತಪರ ಚಿಂತನೆಯ ವ್ಯಕ್ತಿಗಳಾದ

ರವಿ ಕಿತ್ತೂರ ಅವರನ್ನು ವಿಜಯಪುರ ದಲಿತ ಸಾಹಿತ್ಯ ಪರಿಷತ್ತಿನ ಜಿಲ್ಲಾ ಘಟಕದ ಅಧ್ಯಕ್ಷರನ್ನಾಗಿ ನೇಮಕಾಮಾಡಿದ ಬಗ್ಗೆ ದ ಸಾ ಪ ಬೆಳಗಾವಿ ವಿಭಾಗದ ಸಂಯೋಜಕರಾದ ಮೋಹನ. ಕಟ್ಟಿಮನಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಜಯಪುರ ಜಿಲ್ಲೆಗೆ ಇನ್ನೊಂದು ಸಚಿವ ಸ್ಥಾನ ಬೇಕು

### ಹೈಕಮಾಂಡ ಮುಖಂಡರಿಗೆ ಸಚಿವ ಎಂ.ಬಿ.ಪಾಟೀಲ ಕೋರಿಕೆ

■ ಉದಯರಶ್ಮಿ ದಿನಪತ್ರಿಕೆ



ಬೆಂಗಳೂರು: ವಿಜಯಪುರ ಜಿಲ್ಲೆಗೆ ಇನ್ನೊಂದು ಸಚಿವ ಸ್ಥಾನ ಬೇಡಿಕೆ ಇದ್ದು, ಜಿಲ್ಲೆಗೆ ಇನ್ನೊಂದು ಸಚಿವ ಸ್ಥಾನ ನೀಡುವಂತೆ ಹೈಕಮಾಂಡ ಮುಖಂಡ-ರಿಗೆ ವಿನಂತಿಸಿದ್ದೇನೆ ಎಂದು ಸಚಿವ ಎಂ.ಬಿ.ಪಾಟೀಲ ಅವರು ತಿಳಿಸಿದ್ದಾರೆ.

ಸಚಿವರಾಗಿ ಪ್ರಮಾಣ ಸ್ವೀಕ-ರಿಸುವ ಮುಂಚೆ ಬೆಂಗಳೂರಿನ ತಮ್ಮ ನಿವಾಸದಲ್ಲಿ ಅಭಿನಂದನೆ ಸಲ್ಲಿಸಿದ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಮತ್ತು ಅಭಿಮಾನಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ವಿಜಯಪುರ ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷದಿಂದ 6 ಜನ ಶಾಸಕರಾಗಿ ಆಯ್ಕೆಯಾಗಿದ್ದಾರೆ. ಜಿಲ್ಲೆಯ ಅಭಿವೃದ್ಧಿಯ ದೃಷ್ಟಿಯಿಂದ ಇನ್ನೊಂದು ಸಚಿವ ಸ್ಥಾನ ನೀಡುವಂತೆ ಹೈಕಮಾಂಡ ಮುಖಂಡ-ರಿಗೆ ವೈಯಕ್ತಿಕವಾಗಿ ವಿನಂತಿಸಿದ್ದೇನೆ. ಮುಂದಿನ ಸಚಿವ ಸಂಪುಟದಲ್ಲಿ ಅದು ಈಡೇರಲಿದೆ ಎಂದರು.

ಈ ಹಿಂದೆ 5 ವರ್ಷ ಜಲಸಂಪನ್ಮೂಲ ಸಚಿವನಾಗಿ, ಅಲ್ಪ ಅವಧಿಗೆ ಗೃಹ ಸಚಿವನಾಗಿ ಮತ್ತು ಮೂರು ವರ್ಷ ಕೈಗಾರಿಕೆ ಸಚಿವನಾಗಿ ಮಾಡಿದ ಕಾರ್ಯ ನನಗೆ ತೃಪ್ತಿ ತಂದಿದೆ. ಶ್ರೀ ಸಿದ್ದೇಶ್ವರ ಮಹಾಸ್ವಾಮೀಜಿಯವರ ಆಶೀರ್ವಾದದಿಂದ ಸಿಕ್ಕ ಅವಕಾಶವನ್ನು ಸದುಪಯೋಗಪಡಿಸಿಕೊಂಡಿದ್ದೇನೆ. ವಿಜಯಪುರ ಜಿಲ್ಲೆಯ ಜನತೆಯ ಆಶೀರ್ವಾದದಿಂದ ಇದೀಗ ಮತ್ತೆ ಸಚಿವನಾಗಿದ್ದೇನೆ. ಖಾತೆ ಯಾವುದು ಸಣ್ಣದಲ್ಲ, ದೊಡ್ಡದಲ್ಲ. ಗ್ರಂಥಾಲಯ ಸಚಿವನಾದರೂ ಪ್ರತಿ ಹಳ್ಳಿಗಳಲ್ಲಿ ಗ್ರಂಥಾಲಯ ತೆರೆದು ಜ್ಞಾನದ ಪ್ರಸಾರ ಮಾಡಿ, ಆ ಇಲಾಖೆಯ ಘನತೆಯನ್ನು ಹೆಚ್ಚಿಸಬಹುದು ಎಂದರು.

ವಿಜಯಪುರ ಜಿಲ್ಲೆಯಲ್ಲಿ 8 ಮತಕ್ಷೇತ್ರಗಳು ಇದ್ದು, ಮುಂದಿನ ಬಾರಿ ಎಲ್ಲ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಪಕ್ಷದಿಂದ ಶಾಸಕರ ಆಯ್ಕೆಯಾಗಲು ನಾವೆಲ್ಲರೂ ಶ್ರಮಿಸಬೇಕಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಪಕ್ಷದ ಮುಖಂಡರಾದ ಎಸ್.ಎಂ. ಪಾಟೀಲ ಗಣಿಯಾರ, ಮಾಜಿ ಶಾಸಕ ರಾಜು ಆಲಗೂರ, ಹಿರಿಯ ನ್ಯಾಯವಾದಿ ಎಸ್.ಎಸ್.ಛಾಯಾಗೋಳ, ಅಹಿಂದ ಮುಖಂಡ ಸೋಮನಾಥ ಕಳ್ಳಿಮನಿ ಮಾತನಾಡಿ, ಎಂ.ಬಿ.ಪಾಟೀಲ-ರಿಗೆ ಅಭಿನಂದಿಸಿದರು.

ವೇದಿಕೆಯಲ್ಲಿ ತಿಕೋಟಾ-ಬಬಲೇಶ್ವರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಸಿದ್ದು ಗೌಡನವರ, ಈರಗೊಂಡ ಬಿರಾದಾರ, ಮುಖಂಡರಾದ ಜಿ.ಪಂ. ಮಾಜಿ ಅಧ್ಯಕ್ಷರಾದ ಸೋಮನಾಥ ಬಾಗಲಕೋಟ, ಬಸವರಾಜ ದೇಸಾಯಿ ಜೈನಾಪುರ, ವಿ ಎಸ್. ಪಾಟೀಲ, ವಿಡಿಎ ಅಧ್ಯಕ್ಷ ಗಂಗಾಧರ ಸಂಬಣ್ಣಿ, ಸಂತೋಷ ಹೊಕ್ರಾಣಿ, ಚೆನ್ನು ವಾರದ, ಆರ್.ಜೆ.ಯರನಾಳ, ಜಕ್ಕಪ್ಪ ಯಡವೆ ಸೇರಿದಂತೆ ವಿಜಯಪುರ, ಬಾಗಲಕೋಟ, ಬೆಂಗಳೂರು ಹಾಗೂ ಮೈಸೂರು ಜಿಲ್ಲೆಗಳಿಂದ ಆಗಮಿಸಿದ ನೂರಾರು ಹಿರಿಯರು, ಕಾರ್ಯಕರ್ತರು, ಅಭಿಮಾನಿಗಳು ಉಪಸ್ಥಿತರಿದ್ದರು.

## ಎಚ್‌ಪಿವಿ ಲಸಿಕೆ ಗರ್ಭಕಂಠದ ಕ್ಯಾನ್ಸರ್ ತಡೆಗೆ ಸಹಕಾರಿ : ಡಾ. ರವಿಕುಮಾರ

■ ಉದಯರಶ್ಮಿ ದಿನಪತ್ರಿಕೆ




ಎಚ್ ಡಿ ಕೋಟೆ: ಗರ್ಭಕಂಠದ ಕ್ಯಾನ್ಸರ್ ತಡೆಗಟ್ಟಲು ಕೇಂದ್ರ ಸರ್ಕಾರವು 14 ವರ್ಷದ ಹೆಣ್ಣುಮಕ್ಕಳಿಗೆ ಉಚಿತ ಎಚ್‌ಪಿವಿ ಲಸಿಕಾ ಅಭಿಯಾನವನ್ನು ರಾಷ್ಟ್ರವ್ಯಾಪಿಯಾಗಿ ಜಾರಿಗೆ ತಂದಿದೆ. ಈ ಲಸಿಕೆಯು ಕ್ಯಾನ್ಸರ್ ಉಂಟುಮಾಡುವ ವೈರಸ್‌ಗಳ ವಿರುದ್ಧ ಶೇಕಡಾ 93-100 ರಷ್ಟು ಪರಿಣಾಮಕಾರಿಯಾಗಿ ರಕ್ಷಣೆ ನೀಡುತ್ತದೆ ಎಂದು ತಾಲೂಕು ಆರೋಗ್ಯಾಧಿಕಾರಿ ಡಾ. ರವಿಕುಮಾರ್ ಹೇಳಿದರು.

ತಾಲೂಕಿನ ಹೀರೆಹಳ್ಳಿ ಬಿ ಕಾಲೋನಿಯ ಹಾಲು ಉತ್ಪಾದಕ ಕೇಂದ್ರದ ಆವರಣದಲ್ಲಿ 14 ವರ್ಷದ ಹೆಣ್ಣು ಮಕ್ಕಳಿಗೆ ಗರ್ಭಕಂಠ ಕ್ಯಾನ್ಸರ್ ನಿರೋಧಕ ಲಸಿಕಾ ಅಭಿಯಾನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಎಚ್‌ಪಿವಿ ಲಸಿಕೆ ಆಧುನಿಕ ಜೈವಿಕ ತಂತ್ರಜ್ಞಾನದ ಮೆಡಿಕಲ್ ಡೋಸ್ ಎಂದು ಹೇಳಬಹುದಾಗಿದೆ. ಶಿಫಾರಸು ಮಾಡಿರುವ ವಯಸ್ಸಿನಲ್ಲಿ ಲಸಿಕೆಯನ್ನು ನೀಡಿದಾಗ, ವೈರಸ್ ದೇಹವನ್ನು ಪ್ರವೇಶಿಸುವ ಮೊದಲು, ಅಂದರೆ ಸೂಕ್ತ ವಯಸ್ಸಿನಲ್ಲಿ (ಪ್ರಮುಖವಾಗಿ 9 ರಿಂದ 14 ವರ್ಷದೊಳಗೆ) ಈ ಲಸಿಕೆಯನ್ನು ನೀಡಿದರೆ, ಶೇ. 90ರಷ್ಟು ಗರ್ಭಕಂಠದ ಕ್ಯಾನ್ಸರ್ ಪ್ರಕರಣಗಳನ್ನು ತಡೆಗಟ್ಟಬಹುದಾಗಿದೆ. ಸದರಿ ಲಸಿಕೆಯ ಫಲಾನುಭವಿಗಳು 14 ವರ್ಷದ ಹೆಣ್ಣು ಮಕ್ಕಳಾಗಿದ್ದು. ಊಕಗಿ ಲಸಿಕಾಕರಣವನ್ನು ಜಿಲ್ಲೆಯ ಎಲ್ಲಾ ಸರ್ಕಾರಿ ಪ್ರಾಥ-ಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು ಮತ್ತು ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಗಳಲ್ಲಿ ವೈದ್ಯರ ಮೂಲಕ ಲಸಿಕೆಯನ್ನು ನೀಡಲಾಗುವುದು ಎಂದು ಹೇಳಿದರು.

ಇದೇ ವೇಳೆ ಪೌಷ್ಟಿಕ ಆಹಾರ ಆಹಾರ ಪದಾರ್ಥಗಳ ಬಳಕೆ, ಸೊಪ್ಪು ತರಕಾರಿ, ಬೇಳೆಕಾಳು, ಹಣ್ಣುಗಳ ಸೇವನೆ ಮತ್ತು ಶುದ್ಧ ಕುಡಿಯುವ ನೀರನ್ನು ಬಳಸುವ ಬಗ್ಗೆ ಅರಿವು ಮೂಡಿಸಲಾಯಿತು.

ಕಾರ್ಯಕ್ರಮದಲ್ಲಿ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಶರಣಪ್ಪ ರಮಾಣಿ, ವಕೀಲರಾದ ಅಭಿಕುಮಾರ್ , ಕ್ಷೀರ ಸಂಘದ ಅಧ್ಯಕ್ಷರಾದ ಲಕ್ಷ್ಮಿ, ಉಪಾಧ್ಯಕ್ಷರಾದ ನಾಗರತ್ನ, ಹಾಲು ಉತ್ಪಾದನ ಕೇಂದ್ರದ ಕಾರ್ಯ ದರ್ಶಿ ಜ್ಯೋತಿ ಹಾಜರಿದ್ದರು.

## ಶಿವಾನಂದ ಪಾಟೀಲರಿಗೆ ಡಿಸಿಎಂ ಸ್ಥಾನ ನೀಡಲು ಒತ್ತಾಯ

■ ಉದಯರಶ್ಮಿ ದಿನಪತ್ರಿಕೆ



ಕೊಲ್ಹಾರ: ಬಸವನ ಬಾಗೇವಾಡಿ ಮತಕ್ಷೇತ್ರದ ಶಾಸಕ ಶಿವಾನಂದ ಪಾಟೀಲ-ರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡಬೇಕು ಎಂದು ಬಸವನಬಾಗೇವಾಡಿ ತಾಲೂಕಿನ ಮಹಿಳಾ ಬ್ಲಾಕ್ ಕಾಂಗ್ರೆಸ್ ಉಪಾಧ್ಯಕ್ಷರು ಹಾಗೂ ಪಂಚ ಗ್ಯಾರಂಟಿ ಅನುಷ್ಠಾನ ಸಮಿತಿ ಕೊಲ್ಹಾರ ತಾಲೂಕ ಸದಸ್ಯರಾದ ಕಮಲಾ ಮಾಕಾಳಿ ಒತ್ತಾಯಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಸಚಿವ ಶಿವಾನಂದ ಪಾಟೀಲರು ಹಲವು ದಶಕಗಳಿಂದ ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತರಾಗಿ, ರಾಜ್ಯದ ಅಭಿವೃದ್ಧಿಗೆ ಪಕ್ಷ ಸಂಘಟನೆಗೆ ಶ್ರಮಿಸಿದ್ದಾರೆ ಜನಪರ ನಾಯಕರಾಗಿ ಹಾಗೂ ಅಭಿವೃದ್ಧಿ ಪರ ಚಿಂತಕರಾಗಿ ಎರಡು ಬಾರಿ ಸಚಿವರಾಗಿ ಕಾರ್ಯನಿರ್ವಹಿಸುವ ಮೂಲಕ ಸೇವೆ ಸಲ್ಲಿಸಿದ್ದಾರೆ ವಿಜಯಪುರ ಜಿಲ್ಲೆ ಸೇರಿದಂತೆ ಉತ್ತರ ಕರ್ನಾಟಕ ಭಾಗದ ಅಭಿವೃದ್ಧಿಗೆ ಅವರು ನೀಡಿರುವ ಕೊಡುಗೆ ಅಪಾರವಾಗಿದೆ. ರಾಜ್ಯದ ಮುಖ್ಯಮಂತ್ರಿ ಹಾಗೂ ಕಾಂಗ್ರೆಸ್ ಹೈಕಮಾಂಡ್ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಶಿವಾನಂದ ಪಾಟೀಲವರಿಗೆ ಲಿಂಗಾಯತ ಕೋಟಾದಡಿ ಉಪಮುಖ್ಯಮಂತ್ರಿ ಸ್ಥಾನ ನೀಡಬೇಕು ಎಂದು ಸಮಗ್ರ ವಿಜಯಪುರ ಜಿಲ್ಲೆಯ ಹಾಲುಮತ ಸಮಾಜದಿಂದ ಮನವಿ ಮಾಡಿದ್ದಾರೆ.

ಕರ್ನಾಟಕ ಸರಕಾರ
(ಪಂಚಾಯತ್ ರಾಜ್ ಇಂಜಿನೀಯರಿಂಗ್ ಇಲಾಖೆ)
ಕಾರ್ಯನಿರ್ವಾಹಕ ಅಧಿಕಾರಿಗಳ ಕಾರ್ಯಾಲಯ
ತಾಲೂಕು ಪಂಚಾಯತ್ ದೇವರಹಿಪ್ಪರಗಿ.
ದೂರವಾಣಿ:08424-200114, ಇ-ಮೇಲ್:eotpdhp@gmail.com
ಸಂಖ್ಯೆ:ತಾಪಂಕಾ/ಟೆಂ.ಪ್ರಕಟಣೆ/2024-25/79 ದಿನಾಂಕ: 01.06.2026
ಇ-ಪ್ರೊಕ್ಯೂರ್‌ಮೆಂಟ್ ಟೆಂಡರ ಪ್ರಕಟಣೆ
ಕಾರ್ಯನಿರ್ವಾಹಕ ಅಧಿಕಾರಿಗಳು ತಾಲೂಕು ಪಂಚಾಯತ್ ದೇವರ ಹಿಪ್ಪರಗಿ ಇವರು 2026-27ನೇ ಸಾಲಿನ ಈ ಕಚೇರಿಗೆ ಬಾಡಿಗೆ ಆಧಾರದ ಮೇಲೆ ವಾಹನ ಪೂರೈಸುವ ಕಾಮಗಾರಿಗಳ ತಲಾ ರೂ. 3,60,000/- ಕಾಮಗಾರಿಗಳನ್ನು ಇ-ಟೆಂಡರ್‌ನ್ನು ಆಹ್ವಾನಿಸಿದ್ದು, ಟೆಂಡರಿನ ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ www.kppp.karnataka.gov.in ನಲ್ಲಿ ಅಥವಾ ಕಚೇರಿ ಸಮಯದಲ್ಲಿ ಸದರಿ ವಿಭಾಗ ಕಾರ್ಯಾಲಯಕ್ಕೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಬಹುದು.
ಸಹಿ/- ಕಾರ್ಯನಿರ್ವಾಹಕ ಅಧಿಕಾರಿಗಳು,
ತಾಲೂಕು ಪಂಚಾಯತ್, ದೇವರ ಹಿಪ್ಪರಗಿ
ವಾಸಾಸಂಇ/ವಿಜಯಪುರ/125/ಕೆಎಸ್‌ಎಂಸಿಎ/2026-27

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR